MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

VOICE OF THE NATION


ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

**ಯುವ ಸ್ಫೂರ್ತಿ**



"ಯಾವುದಕ್ಕೂ ಹೆದರಬೇಡಿ. ನೀವು ಅದ್ಭುತವಾದ ಕೆಲಸವನ್ನು ಮಾಡುತ್ತೀರಿ. ನಿರ್ಭಯತೆಯು ಒಂದು ಕ್ಷಣದಲ್ಲಿಯೂ ಸ್ವರ್ಗವನ್ನು ತರುತ್ತದೆ."

–ಸ್ವಾಮಿ ವಿವೇಕಾನಂದ

ಸಂಪುಟ: 04 | ಸಂಚಿಕೆ : 175 | ಶುಕ್ರವಾರ: 25–04–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ:2–00

VOLUME: 04 | ISSUE: 175 | FRIDAY: 25–04–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

# ಉಗ್ರರ ವಿರುದ್ಧ ಪ್ರತೀಕಾರ ಖಚಿತ

**ಪಾಟ್ನಾ,ಏ.25–**ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ದಾಳಿ ಮಾಡಿದ ಉಗ್ರರು ಮತ್ತು ದಾಳಿಯ ಸಂಚು ರೂಪಿಸಿದವರಿಗೆ ಕಲ್ಪನೆಗೂ ಮೀರಿದ ಶಿಕ್ಷೆ ಆಗಲಿದೆ ಎಂದು ಪ್ರಧಾನಿ ನರೇಂದ್ರಮೋದಿ ಗುಡುಗಿದ್ದಾರೆ.ಪಹಲ್ಗಾಮ್‌ನ ಬೀಭತ್ಸ ಕೃತ್ಯದ ನಂತರ ಇಡೀ ದೇಶವೇ ಸಿಡಿದೆದ್ದು ತುಡಿಯುತ್ತಿರುವ ಸಂದರ್ಭದಲ್ಲಿ ಪ್ರಧಾನಿ ಮೋದಿ ಅವರು ಉಗ್ರರಿಗೆ ಘನಘೋರ ಎಚ್ಚರಿಕೆ ನೀಡಿ ಕಲ್ಪನೆಗೂ ಮೀರಿದ ಶಿಕ್ಷೆ ನೀಡುತ್ತೇವೆ ಎಂದು ಹೇಳಿರುವುದು ಮುಂದೆ ಭಾರತ ಉಗ್ರರ ವಿರುದ್ಧ ಯಾವ ರೀತಿಯ ಪ್ರತೀಕಾರ ತೆಗೆದುಕೊಳ್ಳುತ್ತದೆ ಎಂಬುದನ್ನು ಸಂಕೇತಿಸಿದೆ.ಉಗ್ರರನ್ನು ಹುಡುಕಿ ಹೊಡೆಯಲಿದ್ದೇವೆ ಅವರಿಗೆ ತಕ್ಕ ಶಾಸ್ತಿ ಮಾಡಿಯೇ ತೀರುತ್ತೇವೆ ಎಂದು ಪ್ರಧಾನಿ ಮೋದಿ ಖಡಕ್ ಎಚ್ಚರಿಕೆ ನೀಡಿದರು.ಪಹಲ್ಗಾಮ್‌ನಲ್ಲಿ ನಡೆದಿರುವ ದಾಳಿ ಕೇವಲ ಜನರ ಮೇಲೆ ನಡೆದಿರುವ ದಾಳಿಯಲ್ಲ. ಭಾರತದ ಆತ್ಮದ ಮೇಲೆ



ನಡೆದ ದಾಳಿ. ಈ ರೀತಿಯ ದುಸ್ಸಾಹಸ ಯಾರು ಮಾಡಿದ್ದಾರೋ, ಯಾರು ಈ ದಾಳಿಯ ಹಿಂದಿದ್ದಾರೋ ಅವರಿಗೆ ಕಲ್ಪನೆಗೂ ಮೀರಿದ ಶಿಕ್ಷೆ ನೀಡುತ್ತೇವೆ ಎಂದು ಪ್ರಧಾನಿ ಮೋದಿ ಹೇಳಿದರು.ಉಗ್ರರನ್ನು ಎಡೆಮುರಿ ಕಟ್ಟಿ ನಮ್ಮ ದೇಶದಿಂದ ಹೊರ ಹಾಕುವ ಸಮಯ ಬಂದಿದೆ ಭಾರತೀಯರೆಲ್ಲರೂ ಒಗ್ಗಟ್ಟಿನಲ್ಲಿದ್ದರೆ ಉಗ್ರರ ಸೊಂಟ ಮುರಿಯುವುದೇನು ಕಷ್ಟವಲ್ಲ. ಈ ಭೂಮಿಯಿಂದಲೇ ಉಗ್ರರನ್ನು ಹೊರಗಟ್ಟುತ್ತೇವೆ ಎಂದರು.ಬಿಹಾರದ ಮಧುಬನಿಯಲ್ಲಿಂದು ಪ್ರಧಾನಮಂತ್ರಿ ಆವಾಜ್ ಮತ್ತು ದೀನ್‌ದಯಾಳ್ ಉಪಾಧ್ಯಾಯ ಅಂತ್ಯೋದ್ಯಯ ಯೋಜನೆ, ರಾಷ್ಟ್ರೀಯ ಗ್ರಾಮೀಣ ಜೀವನ್ ಮಿಷನ್ ಯೋಜನೆಯ ಜಾರಿ ಕಾರ್ಯಕ್ರಮದಲ್ಲಿ ಮಾತನಾಡಿದ ಪ್ರಧಾನಿ ಮೋದಿ ಅವರು, ಪಹಲ್ಗಾಮ್‌ನಲ್ಲಿ ದಾಳಿ ನಡೆಸಿದ ಸಂಚುಕೋರರು ಮತ್ತು ಉಗ್ರರ ವಿರುದ್ಧ ಕಿಡಿಕಾರಿ ಈ ಕೃತ್ಯವೆಸಗಿರುವವರಿಗೆ ಕಲ್ಪನೆಗೂ ಮೀರಿದ ಶಿಕ್ಷೆ ಸಿಗಲಿದೆ ಎಂದಿದ್ದಾರೆ.ಬಿಹಾರದ ನೆಲದಲ್ಲಿ ನಿಂತು ಇಡೀ ಜಗತ್ತಿಗೆ ಭರವಸೆ ಕೊಡುತ್ತಿದ್ದೇನೆ ಭಾರತವೂ ಪ್ರತಿ ಭಯೋತ್ಪಾದಕ ಮತ್ತು ಭಯೋತ್ಪಾದಕರನ್ನು ಬೆಂಬಲಿಸುವವರನ್ನು ಗುರುತಿಸಿ ಪತ್ತೆ ಹಚ್ಚುತ್ತದೆ. ಜತೆಗೆ ಅವರಿಗೆ ಕಲ್ಪನೆಗೂ ನಿಲುಕದ ರೀತಿಯಲ್ಲಿ ಶಿಕ್ಷೆಯಾಗಲಿದೆ ಎಂದರು.ನಮ್ಮ ಈ ಸಂಕಲ್ಪದಲ್ಲಿ ಇಡೀ ಭಾರತವೇ ಒಂದಾಗಿ ನಿಂತಿದೆ. ಮಾನವೀಯತೆಯನ್ನು ನಂಬುವ, ಪ್ರತಿಪಾದಿಸುವ ಪ್ರತಿಯೊಬ್ಬರೂ ನಮ್ಮ ಜತೆ ನಿಂತಿದ್ದಾರೆ ಎಂದರು.ಪಹಲ್ಗಾಮ್‌ನಲ್ಲಿ ಮೃತಪಟ್ಟವರಲ್ಲಿ ಕನ್ನಡ, ಹಿಂದಿ, ಮರಾಠಿ, ಗುಜರಾತಿ, ಒಡಿಶಾ, ಬಾಂಗ್ಲಾ ಹೀಗೆ ಒಬ್ಬೊಬ್ಬರು ಒಂದು ಭಾಷೆಯನ್ನು ಮಾತನಾಡುವವರಿದ್ದಾರೆ. ಆದರೆ ಅವರ ಸಾವಿಗೆ ಆಕ್ರೋಶ ಮಾತ್ರ ಕಾರ್ಗಿಲ್‌ನಿಂದ ಕನ್ಯಾಕುಮಾರಿವರೆಗೆ ಒಂದೇ ಆಗಿದೆ ಎಂದರು.ಈ ಭಯೋತ್ಪಾದಕ ದಾಳಿಯಲ್ಲಿ ಯಾರೋ ಒಬ್ಬರು ತಮ್ಮ ಮಗನನ್ನು, ಯಾರೋ ಒಬ್ಬರು ತಮ್ಮ ಸಹೋದರರನ್ನು, ಯಾರೋ ಒಬ್ಬರು ತಮ್ಮ ಸಂಗಾತಿಯನ್ನು ಕಳೆದುಕೊಂಡಿದ್ದಾರೆ. ಈ ಎಲ್ಲ ಜನರ ಸಾವಿನ ಬಗ್ಗೆ ನಮ್ಮ

2ನೇ ಪುಟಕ್ಕೆ

## ಡಾ.ರಾಜಕುಮಾರ್ ಕನ್ನಡ ಚಲನಚಿತ್ರರಂಗದ ಶ್ರೇಷ್ಠ ನಟ –ಎಚ್.ಶಿವರಾಜ್

**ಯುವ ಮಾರ್ಗ ಸುದ್ದಿ**




**ದೇವದುರ್ಗ,ಏ.25–**ದೇವದುರ್ಗ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ಮತ್ತು ಸ್ನೇಹ ಕಲಾ ಬಳಗದ ವತಿಯಿಂದ ಪಟ್ಟಣದ ಹೊಸ ಬಸ್ ನಿಲ್ದಾಣ ಹತ್ತಿರ ಇರುವ ಶ್ರೀ ಪಂಡಿತ್ ಪುಟ್ಟರಾಜ್ ಗವಾ ಯಿಗಳ ಸ್ಟುಡಿಯೋದಲ್ಲಿ ಕನ್ನಡ ಚಲನ ಚಿತ್ರರಂಗದ ವರನಟ ನಟಸಾರ್ವಭೌಮ ಡಾ. ರಾಜಕುಮಾರ ಅವರ 96ನೇ ಹುಟ್ಟುಹಬ್ಬದನ್ನು ಆಚರಿಸಲಾಯಿತು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಎಚ. ಶಿವರಾಜ್ ಮಾತನಾಡಿ ಕನ್ನಡ ಚಲನಚಿತ್ರರಂಗದ ಅಪರೂಪದ ಶ್ರೇಷ್ಠ ನಟ ಚಿತ್ರ ಜಗತ್ತಿನ ಆದರ್ಶ ಕಲಾವಿದರು ನಮ್ಮ ಕನ್ನಡ ಚಿತ್ರರಂಗದಲ್ಲಿ ಅರ್ಧ ಶತಮಾನಕ್ಕೂ ಹೆಚ್ಚು ಕಾಲ ಕಲಾ ಸೇವೆಯನ್ನು ಮಾಡಿ ವಿಭಿನ್ನ ನಟರೇನಿಸಿದ್ದಾರೆ ಇವರ ಅಭಿನಯಿಸಿದ ಮೊದಲನೇ ಚಿತ್ರ ಬೇಡರ ಕಣ್ಣಪ್ಪ ನ್ಯಾಯವೇ ದೇವರು ಸಂಧ್ಯಾರಾಗ ನನ್ನ ತಮ್ಮ ಸಾಕ್ಷಾತ್ಕಾರ ಭಲೇ ಹುಚ್ಚ ಭೂದಾನ ಗಾಂಧಿನಗರ

2ನೇ ಪುಟಕ್ಕೆ

## 180 ಕನ್ನಡಿಗರು ರಾಜ್ಯಕ್ಕೆ ವಾಪಸ್

**ಬೆಂಗಳೂರು ಏ.25–**ಕಾರ್ಮಿಕ ಸಚಿವರಾದ ಸಂತೋಷ್ ಲಾಡ್ ರವರು ಮುಖ್ಯಮಂತ್ರಿಯರಾದ ಸಿದ್ದರಾಮಯ್ಯ ಅವರ ಆದೇಶದ ಮೇರೆಗೆ ಜಮ್ಮು–ಕಾಶ್ಮೀರಕ್ಕೆ ತೆರಳಿ ಅಲ್ಲಿ ಪ್ರವಾಸಕ್ಕೆಂದು ತೆರಳಿ ಸಿಲುಕಿಕೊಂಡಿರುವ ನೂರಾರು ಜನ ಕನ್ನಡಿಗರನ್ನು ರಕ್ಷಿಸಿ ಸುರಕ್ಷಿತವಾಗಿ ಕರೆದುಕೊಂಡು ಬರಲು ಅಲ್ಲಿಗೆ ಕಳಿಸಲಾಗಿತ್ತು.

ಅದರಂತೆ ಸಚಿವರು ಇಂದು 12:30 ನಿಮಿಷಕ್ಕೆ ಸುಮಾರು 180 ಜನ ಕನ್ನಡಿಗರನ್ನು ಸುರಕ್ಷಿತವಾಗಿ ಬೆಂಗಳೂರಿಗೆ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಕರೆದುಕೊಂಡು ಬಂದಿದ್ದಾರೆ.

ಬೆಂಗಳೂರಿನ ಕೆಂಪೇಗೌಡ ವಿಮಾನ ನಿಲ್ದಾಣದಕ್ಕೆ ಬಂದಿಳಿದ ಪ್ರವಾಸಿಗರು ಆ ಬಳಿಕ ತಮ್ಮ ತಮ್ಮ ಪ್ರದೇಶಗಳಿಗೆ ತೆರಳಿದರು.ಕಾಶ್ಮೀರಕ್ಕೆ ತೆರಳಿರುವ ಕನ್ನಡಿಗರನ್ನು ಅತ್ಯಂತ ಸುರಕ್ಷಿತವಾಗಿ ತಾಯ್ನಾಡು ಕರ್ನಾಟಕಕ್ಕೆ ಕರೆತರುವ ನಿಟ್ಟಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ಮೇರೆಗೆ ಸಕಲ ವ್ಯವಸ್ಥೆಗಳನ್ನು ಕೈಗೊಂಡಿರುವ ಟ್ರಬಲ್ ಶೂಟರ್ ಕಾರ್ಮಿಕ



ಸಚಿವ ಸಂತೋಷ ಲಾಡ್ ಅವರು 180 ಕನ್ನಡಿಗರನ್ನು ಶ್ರೀನಗರದ ವಿಮಾನ ನಿಲ್ದಾಣದಿಂದ ವಿಶೇಷ ವಿಮಾನದ ಮೂಲಕ ಕರೆತಂದಿದ್ದಾರೆ.

2ನೇ ಪುಟಕ್ಕೆ

## ಅರೋಲಿ ಶ್ರೀ ಹುಲಿಗೆಮ್ಮ ದೇವಿ ಜಾತ್ರಮಹೋತ್ಸವ: ಹರಾಜಿನಲ್ಲಿ 21.95 ಲಕ್ಷ ರೂ.ಅದಾಯ ಸಂಗ್ರಹ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಏ.25–**ಪಟ್ಟಣದ ತಹಸೀಲ್ದಾರ್ ಕಛೇರಿ ಸಭಾಂಗಣದಲ್ಲಿ ಅರೋಲಿ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಆಡಳಿತಾಧಿಕಾರಿಗಳು ಹಾಗೂ ತಹಸೀಲ್ದಾರ್ ಭೀಮರಾಯ ರಾಮಸಮುದ್ರ ಮಾತನಾಡಿ ತಾಲೂಕಿನ ಧಾರ್ಮಿಕ ದತ್ತಿ ಇಲಾಖೆಗೆ ಸೇರಿದ ಅರೋಲಿ ಗ್ರಾಮದಲ್ಲಿನ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದಲ್ಲಿ ಮೇ.15 ರಿಂದ 16 ರವರೆಗೆ ನಡೆಯುವ ಜಾತ್ರಮಹೋತ್ಸವ ಅಂಗವಾಗಿ ಇಲಾಖೆಯಿಂದ ನಡೆದ ಹರಾಜು ಪ್ರಕ್ರಿಯೆಯಲ್ಲಿ ಜಾತ್ರೆ ಸಮಯದಲ್ಲಿ ಸಗಟು ತೆಂಗಿನಕಾಯಿ ಮಾರಾಟಕ್ಕಾಗಿ ವಲಿಬಾಷ ರವರು 8 ಲಕ್ಷ 55 ಸಾವಿರ ರೂ , ಹನುಮೇಶ ಅರೋಲಿ ರವರು ಮಂಗಳಾರತಿ ಹಾಗೂ



ತೆಂಗಿನಕಾಯಿ ಹೊಡೆಯುವುದಕ್ಕಾಗಿ 5ಲಕ್ಷ 35 ಸಾವಿರ ರೂ, ನಾಗರಾಜ ಅರೋಲಿಯವರು ಜಾತ್ರೆ ನಂತರ 11 ತಿಂಗಳವರೆಗಿನ

2ನೇ ಪುಟಕ್ಕೆ

## ಮಕ್ಕಳಿಗೆ ಶಿಕ್ಷಣದ ಜೊತೆ ಆಧ್ಯಾತ್ಮಿಕ ಸಂಸ್ಕಾರ ನೀಡಿ: ಬಯ್ಯಾಪೂರು

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು ,ಏ.25–** ಆಧುನಿಕತೆಯಿಂದಾಗಿ ಪ್ರತಿಯೊಬ್ಬ ಮಗುವಿನ ಕೈಯಲ್ಲಿ ಮೊಬೈಲ್ ಇದೆ. ಮೊಬೈಲ್ ಗೀಳಿಂದ ಮಕ್ಕಳನ್ನು ದೂರವಿಟ್ಟು ಶಿಕ್ಷಣದ ಜೊತೆ ಆಧ್ಯಾತ್ಮಿಕ ಸಂಸ್ಕಾರ ನೀಡಿದಾಗ ಮಾತ್ರ ಉತ್ತಮ ಪ್ರಜೆಗಳಾಗಲು ಸಾಧ್ಯವೆಂದು ವಿಧಾನ ಪರಿಷತ್ತು ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪೂರು ಅಭಿಪ್ರಾಯಪಟ್ಟರು. ಪುರಸಭೆ ವ್ಯಾಪ್ತಿಯ ಕರಡಕಲ್ ಗ್ರಾಮದಲ್ಲಿ ಶ್ರೀ ಬೀರೇಶ್ವರ ದೇವಸ್ಥಾನದ 11ನೇ ವಾರ್ಷಿಕೋತ್ಸವ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಅವರು, ಧಾರ್ಮಿಕ ಕಾರ್ಯಕ್ರಮಗಳಿಂದ ಮನಶಾಂತಿ ಹಾಗೂ ಕೌಟುಂಬಿಕ ನೆಮ್ಮದಿ ದೊರೆಯುತ್ತದೆ ಆದ್ದರಿಂದ ಕಾಲಕಾಲಕ್ಕೆ ಧಾರ್ಮಿರ್ಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡಬೇಕೆಂದರು.



ಮಾಜಿ ಸಂಸದ ವಿರುಪಾಕ್ಷಪ್ಪ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿ ಮಕ್ಕಳಿಗೆ ಆಸ್ತಿ ಮಾಡಬೇಡಿ

2ನೇ ಪುಟಕ್ಕೆ

## ಜವಾಬ್ದಾರಿ ಅರಿತು ಮಾತಾಡಲಿ ಸಿಎಂಗೆ ಬಿವೈವಿ ತಿರುಗೇಟು

**ಬೆಂಗಳೂರು,ಏ.25–** ಜವಾಬ್ದಾರಿಯುತ ಸ್ಥಾನದಲ್ಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಚಿವ ಪ್ರಿಯಾಂಕ್ ಖರ್ಗೆ ಇವರುಗಳು ಹೊಣೆಯರಿತು ಮಾತನಾಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ಅವರು ತಿಳಿಸಿದ್ದಾರೆ.ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ನೀವು ಕೇಂದ್ರದ ಬೇಹುಗಾರಿಕಾ ವೈಫಲ್ಯಗಳ ಬಗ್ಗೆ ಮಾತನಾಡುತ್ತೀರಿ. ಸಿದ್ದರಾಮಯ್ಯನವರೇ, ನೀವು ಸೋನಿಯಾ ಗಾಂಧಿ, ರಾಹುಲ್ ಗಾಂಧಿಗೆ ಪ್ರಶ್ನೆ ಮಾಡಬೇಕಿದೆ. ಕಾಂಗ್ರೆಸ್ಸಿನವರು ಸ್ವಾತಂತ್ರ್ಯ ಬಂದ ಬಳಿಕ ಈ ದೇಶವನ್ನು 60 ವರ್ಷಗಳ ಕಾಲ ಆಡಳಿತ ನಡೆಸಿದ್ದಾರೆ.ಭಯೋತ್ಪಾದನೆಯನ್ನು ಈ ದೇಶದಿಂದ ಕಿತ್ತು ಹಾಕಲು ಕಾಂಗ್ರೆಸ್ ಪಕ್ಷಕ್ಕೆ ಯಾಕೆ ಸಾಧ್ಯವಾಗಿಲ್ಲ ಎಂದು ಕೇಳಲು ಸವಾಲೆಸೆದರು.ಇದರ ಬಗ್ಗೆ ಚರ್ಚಿಸುವುದನ್ನು ಬಿಟ್ಟು, ಇಂಥ ಸಂದಿಗ್ಧ ಪರಿಸ್ಥಿತಿಯಲ್ಲಿ ಪ್ರತಿಯೊಬ್ಬ ಭಾರತೀಯರೂ ಒಟ್ಟಾಗಿ, ಒಂದಾಗಿ ನಿಲ್ಲಬೇಕಾಗಿದೆ. ಈ ಜಗತ್ತಿಗೆ ಒಂದು ಸ್ಪಷ್ಟ ಸಂದೇಶ ನೀಡಬೇಕಾಗಿದೆ ಎಂದು ತಿಳಿಸಿದರು.ಭಯೋತ್ಪಾದನೆ ಎಂಬುದು ಕೇವಲ ಭಾರತಕ್ಕೆ ಸೀಮಿತವಾಗಿಲ್ಲ; ಇದು ಜಾಗತಿಕ ಸಮಸ್ಯೆ. ಹಾಗಾಗಿ ಪ್ರಧಾನಿ ನರೇಂದ್ರ ಮೋದಿಜೀ ಅವರು ಯಾವುದೇ ದೇಶಕ್ಕೆ ಹೋದಾಗಲೂ ಉಗ್ರವಾದವನ್ನು ಜಗತ್ತು



ಖಂಡಿಸಬೇಕು; ಬುಡಸಮೇತ ಕಿತ್ತು ಹಾಕಬೇಕೆಂದು ಬಲವಾಗಿ ಪ್ರತಿಪಾದನೆ ಮಾಡುತ್ತಿದ್ದಾರೆ ಎಂದು ವಿವರಿಸಿದರು.ಸಿದ್ದರಾಮಯ್ಯ, ಮಲ್ಲಿಕಾರ್ಜುನ ಖರ್ಗೆ, ಪ್ರಿಯಾಂಕ್ ಖರ್ಗೆ ಅವರಿಗೆ ಕೇಳಲು ಬಯಸುತ್ತೇನೆ. ನೀವು ಮಲ್ಲಿಕಾರ್ಜುನ ಖರ್ಗೆ ಅವರ ಟ್ವೀಟ್ ನೋಡಿ. ಮಲ್ಲಿಕಾರ್ಜುನ ಖರ್ಗೆ ಅವರು ಟ್ವೀಟ್‌ನಲ್ಲಿ ಭಾರತೀಯ ಪ್ರವಾಸಿಗರ ಮೇಲೆ ಭಯೋತ್ಪಾದಕರು ದಾಳಿ ಮಾಡಿದ್ದಾಗಿ

2ನೇ ಪುಟಕ್ಕೆ

## ದತ್ತು ಗ್ರಾಮದಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ವಿಶೇಷ ಶಿಬಿರಕ್ಕೆ ಚಾಲನೆ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಏ.25–** 2024–2025ನೇ ಸಾಲಿನ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ವಿಶೇಳ ಶಿಬಿರವು ದತ್ತು ಗ್ರಾಮವಾದ ಚಿಕಲ್ಪರ್ವಿಯಲ್ಲಿ ಆರಂಭಗೊಂಡಿತು.

ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸಿದ ಮಠದ ಸಂಸ್ಕೃತ ಉಪಾಧ್ಯಾಯರಾದ ಜಗದೀಶ್ ಅವರು ಮಾತನಾಡಿ, "ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಉತ್ತಮ ಸಂಸ್ಕಾರವನ್ನು ಪಡೆಯಲು ಇಂತಹ ಶಿಬಿರಗಳು ಅತ್ಯಗತ್ಯ. ಈ ಶಿಬಿರಗಳ ಮೂಲಕ ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ ಬೆಳೆಯುವುದರ ಜೊತೆಗೆ, ಅವರ ಭವಿಷ್ಯಕ್ಕೆ ದಾರಿದೀಪವಾಗಲಿದೆ" ಎಂದು ಅಭಿಪ್ರಾಯಪಟ್ಟರು.



ಮುಂದುವರೆದು ಮಾತನಾಡಿದ ಅವರು, "ಗಾಂಧೀಜಿಯವರ ಕನಸನ್ನು ನನಸು ಮಾಡುವ ನಟ್ಟಿನಲ್ಲಿ ಕೇಂದ್ರ ಸರ್ಕಾರವು ಇಂತಹ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವುದು ಶ್ಲಾಘನೀಯ. ಇದರಿಂದ ಗ್ರಾಮದ ನಾಗರಿಕರಲ್ಲಿ ಸ್ವಚ್ಛತೆಯ ಕುರಿತು ಅರಿವು ಮೂಡುತ್ತದೆ. ವಿದ್ಯಾರ್ಥಿಗಳು ನಮ್ಮ ದೇಶದ ಭವ್ಯ ಪರಂಪರೆಯನ್ನು ಜಗತ್ತಿಗೆ ಸಾರುವ ಮೂಲಕ ತಮ್ಮದೇ ಆದ ಕೊಡುಗೆಯನ್ನು ನೀಡಬೇಕು" ಎಂದು ಕರೆ ನೀಡಿದರು.

ಕಾರ್ಯಕ್ರಮದ ಕುರಿತು ಪ್ರಾಸ್ತಾವಿಕ ನುಡಿಗಳನ್ನಾಡಿದ ನಿಕಟ ಪೂರ್ವ ಕಾರ್ಯಕ್ರಮ ಅಧಿಕಾರಿಗಳಾದ ಮಂಜುನಾಥ ನಾಯಕ ಅವರು,ಎನ್‌ಎಸ್‌ಎಸ್ ಸಂಸ್ಥೆಯು ನಡೆದು ಬಂದ

2ನೇ ಪುಟಕ್ಕೆ

## ಮೊದಲನೇಯ ಪುಟದಿಂದ

# ಉಗ್ರರಿಗೆ ಕಲ್ಪನೆಗೂ ಮೀರಿದ ಶಿಕ್ಷೆ

ಮನಸ್ಸಿನಲ್ಲಿರುವ ದುಃಖ ಮತ್ತು ಕೋಪ ಒಂದೇ ಆಗಿದೆ. ಅಮಾಯಕ ನಾಗರಿಕರನ್ನು ಕೊಂದ ಕೌರ್ಯದಿಂದ ಇಡೀ ರಾಷ್ಟ್ರವು ದುಃಖಿತವಾಗಿದೆ. ಎಲ್ಲ ಸಂತ್ರಸ್ಥ ಕುಟುಂಬಗಳ ದುಃಖದಲ್ಲಿ ಇಡೀ ರಾಷ್ಟ್ರ ಭಾಗಿಯಾಗಿದೆ ಎಂದರು.ಈ ದಾಳಿಯ ಸಂದರ್ಭದಲ್ಲಿ ಗಾಯಗೊಂಡವರಿಗೆ ಚಿಕಿತ್ಸೆ ನಡೆಯುತ್ತಿದೆ ಅವರು ಬೇಗ ಗುಣಮುಖರಾಗುವಂತೆ ನೋಡಿಕೊಳ್ಳಲು ಸರ್ಕಾರ ಎಲ್ಲ ಪ್ರಯತ್ನ ನಡೆಸಿದೆ ಎಂದು ಪ್ರಧಾನಿ ಮೋದಿ ಹೇಳಿದರು.ಭಯೋತ್ಪಾದನೆ ಎದುರು ಭಾರತ ಎಂದೂ ತಲೆಬಾಗುವುದಿಲ್ಲ ಎಂದು ಅವರು ಹೇಳಿದರು.ಪಹಲ್ಗಾಮ್ ಉಗ್ರರ ದಾಳಿ ನಂತರ ನಮ್ಮ ಜತೆ ನಿಂತ ದೇಶಗಳ ಜನರಿಗೆ ಹಾಗೂ ನಾಯಕರಿಗೆ ನಾನು ಧನ್ಯವಾದ ಹೇಳುತ್ತೇನೆ ಎಂದು ಪ್ರಧಾನಿ ಮೋದಿ ಹೇಳಿದರು.ಉಗ್ರರಿಗೆ ಹಾಗೂ ಸಂಚುಕೋರರಿಗೆ ಶಿಕ್ಷೆ ನೀಡುವ ಮಾತುಗಳನ್ನು ಪ್ರಧಾನಿಯವರು ಹಿಂದಿ ಮತ್ತು ಇಂಗ್ಲಿಷ್‌ನಲ್ಲಿ ಹೇಳುವ ಮೂಲಕ ಒಂದು ದೊಡ್ಡ ಸಂದೇಶವನ್ನು ರವಾನಿಸಿದ್ದಾರೆ.ಈ ಕಾರ್ಯಕ್ರಮಕ್ಕೂ ಮೊದಲು ಪಹಲ್ಗಾಮ್‌ನಲ್ಲಿ ಉಗ್ರರ ದಾಳಿಯಿಂದ ಮೃತಪಟ್ಟ ಕುಟುಂಬದವರಿಗೆ ಒಂದು ನಿಮಿಷ ಮೌನ ಆಚರಿಸಿ ಶ್ರದ್ಧಾಂಜಲಿ ಸಲ್ಲಿಸಲಾಯಿತು.

# 180 ಕನ್ನಡಿಗರು ರಾಜ್ಯಕ್ಕೆ ವಾಪಸ್

ಇಂದು ಬೆಳಗ್ಗೆ 8.45ಕ್ಕೆ ಶ್ರೀನಗರ ವಿಮಾನ ನಿಲ್ದಾಣದಿಂದ ವಿಶೇಷ ವಿಮಾನ ಹೊರಟಿದ್ದು,ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಇದೀಗ ಬಂದಿಳಿದಿದೆ.

ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಹತ್ಯೆ ನಡೆದಿದ್ದು ಕನ್ನಡಿಗರು ಸಾವನ್ನಪ್ಪಿ ಹಲವು ಸಿಲುಕಿಕೊಂಡಿದ್ದಾರೆ ಎನ್ನುವ ಮಾಹಿತಿ ತಿಳಿಯುತ್ತಿದ್ದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರನ್ನು ಕಾಶ್ಮೀರಕ್ಕೆ ಕಳುಹಿಸಿಕೊಟ್ಟಿದ್ದರು.

# ಜವಾಬ್ದಾರಿ ಅರಿತು ಮಾತಾಡಲಿ ಸಿಎಂಗೆ ಬಿವೈವಿ ತಿರುಗೇಟು

ಹೇಳಿದ್ದಾರೆ. ಪಾಪ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಹಿಂದೂ ಎಂದು ಅನಿಸಲೇ ಇಲ್ಲ. ಉಗ್ರರು ಪ್ರತಿಯೊಬ್ಬರನ್ನು ಶೂಟ್ ಮಾಡಬೇಕಾದರೆ ಹಿಂದೂವೇ, ಮುಸಲ್ಮಾನರೇ ಎಂದು ಪತ್ತೆ ಹಚ್ಚಿ ಗುಂಡಿಟ್ಟು ಸಾಯಿಸಿದ್ದಾರೆ ಎಂದು ಟೀಕಿಸಿದರು.ಆದರೆ, ಮಲ್ಲಿಕಾರ್ಜುನ ಖರ್ಗೆ ಅವರಿಗೆ ಕೇವಲ ಭಾರತೀಯ ಪ್ರವಾಸಿಗರಷ್ಟೇ ಕಾಣುತ್ತಿದ್ದಾರೆ. ಕಾಂಗ್ರೆಸ್ಸಿನವರಿಗೆ ಹಿಂದೂಗಳು ಕಾಣುತ್ತಿಲ್ಲ; ಇದು ದೇಶದ ದುರ್ದೈವ ಎಂದು ಬೇಸರ ವ್ಯಕ್ತಪಡಿಸಿದರು. ರಾಜಕಾರಣ ಮಾಡುವುದನ್ನು ಬಿಡಬೇಕಿದೆ. ಪ್ರತಿಯೊಬ್ಬ ಭಾರತೀಯರೂ ಒಟ್ಟಾಗಿ, ಒಂದಾಗಿ ನಿಲ್ಲಬೇಕೆಂದು ಮನವಿ ಮಾಡಿದರು.ಜಮ್ಮು ಕಾಶ್ಮೀರದ ಭಯೋತ್ಪಾದಕರ ದಾಳಿಯನ್ನು ಮೋದಿಜೀ ಅವರ ಸರಕಾರವು ಗಂಭೀರವಾಗಿ ಪರಿಗಣಿಸಿದೆ. ಆರ್ಟಿಕಲ್ 370 ರದ್ದತಿ ಹಿಂದೆ ಕಾಶ್ಮೀರವನ್ನು ಸಹಜ ಸ್ಥಿತಿಗೆ ತರುವ ಸದುದ್ದೇಶ ಇತ್ತು. ಪ್ರವಾಸಿಗರನ್ನು ಗುರಿ ಮಾಡಿ, ಜಮ್ಮು ಕಾಶ್ಮೀರಕ್ಕೆ ವಿದೇಶಿ ಪ್ರವಾಸಿಗರು ಬರಬಾರದು; ಅಲ್ಲಿನ ಯುವಕರಿಗೆ ಉದ್ಯೋಗ ಸಿಗಬಾರದು; ಯುವಜನತೆ ಬೀದಿಗೆ ಬಂದು ಅವರನ್ನು ಭಯೋತ್ಪಾದನೆಗೆ ಬಳಸಿಕೊಳ್ಳಬೇಕೆಂಬ ದುರುದ್ದೇಶ ಇದರ ಹಿಂದಿದೆ ಎಂಬ ಚರ್ಚೆಗಳು ನಡೆದಿವೆ ಎಂದು ತಿಳಿಸಿದರು.

# ಮಕ್ಕಳಿಗೆ ಶಿಕ್ಷಣದ ಜೊತೆ ಆಧ್ಯಾತ್ಮಿಕ ಸಂಸ್ಕಾರ ನೀಡಿ: ಬಯ್ಯಾಪೂರು

ಮಕ್ಕಳನ್ನೇ ಆಸ್ತಿಯನ್ನಾಗಿ ಮಾಡಿ, ಮಹಿಳೆಯರಿಗೆ 50% ರಷ್ಟು ಮೀಸಲಾತಿಯನ್ನು ರಾಜಕೀಯದಲ್ಲಿ ಒದಗಿಸಿ ಕೊಟ್ಟಿದ್ದಾರೆ ಅದನ್ನು ಮಹಿಳೆಯರು ಸದುಪಯೋಗವನ್ನು ಪಡಿಸಿಕೊಂಡು ಸಮಾಜದಲ್ಲಿ ಮುಂದೆ ಬರಬೇಕೆಂದು ತಿಳಿಸಿದರು.

ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಕರಡಕಲ್, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಪಾಮಯ್ಯ ಮುರಾರಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಬಸವರಾಜಗೌಡ ಗಣೆಕಲ್, ಪ್ರಮೋದ ಕುಲಕಣ ೯, ಸೋಮನಗೌಡ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋವಿಂದ ನಾಯಕ, ಮುದಗಲ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಿವ ಶಂಕರಗೌಡ, ಯೂಥ್ ಕಾಂಗ್ರೆಸ್ ಅಧ್ಯಕ್ಷ ಸಂತೋಷ್ ಸೊಪ್ಪಿಮಠ. ಶಿಕ್ಷಕ ಮಂಜುನಾಥ ಹಾಗೂ ಹಾಲುಮತ ಸಮಾಜ ಬಾಂಧವರು ಸೇರಿ ಗ್ರಾಮಸ್ಥರು ಇದ್ದರು.

## ಡಾ.ರಾಜಕುಮಾರ್ ಕನ್ನಡ ಚಲನಚಿತ್ರರಂಗದ ಶ್ರೇಷ್ಠ ನಟ

ಧೂಮಕೇತು ಕಸ್ತೂರಿ ನಿವಾಸ ಇವರ ಅಭಿನಯಿಸಿದ ಕಪ್ಪು ಬಿಳುಪು ಈ ಚಿತ್ರಗಳು ರಾಜಣ್ಣನವರಿಗೆ ಹೆಸರು ಮತ್ತು ಪ್ರಸಿದ್ಧಿ ಪಡೆದವು ವರ್ಣ ರಂಜಿತ ಚಿತ್ರಗಳಾದ ಗಂಧದಗುಡಿ, ಕೇರಳದ ಸಿಂಹ ಚಲಿಸುವ ಮೋಡಗಳು ಹಾಲು ಜೇನು, ತಾಯಿಗೆ ತಕ್ಕ ಮಗ ಶಂಕರ್ ಗುರು ಗಿರಿಕನ್ಯೆ ನೀ ನನ್ನ ಗೆಲ್ಲಲಾರೆ ಎರಡು ಕನಸು ಒಡಹುಟ್ಟಿದವರು ಜೀವನ ಚೈತ್ರ ಶಬ್ದವೇದಿ ಆಕಸ್ಮಿಕ ಡಾ ರಾಜಕುಮಾರ್ ಅಭಿನಯಿಸಿದ ಈ ಚಿತ್ರಗಳು ವಿಭಿನ್ನ ಅಮೋಘ ಅಭಿನಯದಿಂದ ಕನ್ನಡ ಚಿತ್ರ ರಸಿಕರ ಮನಸ್ಸಿನಲ್ಲಿ ಈ ಚಿತ್ರಗಳು ಹೀಗೂ ಕೂಡ ಉಳಿದುಕೊಂಡಿವೆ ಪೌರಾಣಿಕ್ ಪಾತ್ರಗಳಾದ ಭೂಕೈಲಾಸ ಕವಿರತ್ನ ಕಾಳಿದಾಸ ಭಕ್ತ ಪ್ರಹ್ಲಾದ ಈ ಚಿತ್ರಗಳ ಮೂಲಕ ರಾಜಕುಮಾರ ಅವರಿಗೆ ಅನೇಕ ಪ್ರಶಸ್ತಿ ಪುರಸ್ಕಾರಗಳು ದೊರಕಿದವು ಪದ್ಮಶ್ರೀ ವಿಭೂಷಣ ಕರ್ನಾಟಕ ರತ್ನ ಹಾಗೂ ರಾಜ್ಯ ಮತ್ತು ರಾಷ್ಟ್ರಮಟ್ಟದ ಅಭಿನಯಕ್ಕಾಗಿ ಉತ್ತಮ ಶ್ರೇಷ್ಠ ನಟ ಪ್ರಶಸ್ತಿ ಗಾಯನಕ್ಕಾಗಿ ಶ್ರೇಷ್ಠ ಪ್ರಶಸ್ತಿ ಪಡೆದುಕೊಂಡಿದ್ದಾರೆ ಭಾರತ ಚಿತ್ರರಂಗವು ನೀಡುವ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿಯು ರಾಜಕುಮಾರ ಅವರು ಪಡೆದುಕೊಂಡಿದ್ದಾರೆ ಇದರಿಂದ ಕನ್ನಡ ಚಲನಚಿತ್ರದ ಹೆಸರನ್ನು ಭಾರತ ಚಿತ್ರರಂಗಕ್ಕೆ ಪರಿಚಯಿಸಿದರು ಈಗ ಸದ್ಯ ಹೇಳುವ ಪ್ಲಾನ್ ಇಂಡಿಯಾ ಚಲನಚಿತ್ರ ಅಂದಿನ ಕಾಲದ ರಾಜಕುಮಾರ ಅಭಿನಯಿಸಿದ ಮೈಹಿಷ ಸುರ ಮರ್ದಿನಿ ಚಲನಚಿತ್ರವು ಏಳು ಭಾಷೆಗಳಲ್ಲಿ ಭಾಷಾಂತರ ಮಾಡಲಾಗಿತ್ತು ಇದರ ಜೊತೆಗೆ ಕನ್ನಡ ನಾಡಿನ ನಾಡು ನುಡಿ ಜಲ ಭಾಷೆ ವಿಚಾರಕ್ಕೆ ಬಂದಾಗ ರಾಜಕುಮಾರ್ ಅವರು ಗೋಕಾಕ್ ಚಳವಳಿಯನ್ನು ಹೋರಾಟ ಮಾಡಿ ಕನ್ನಡ ನಮ್ಮ ಅಸ್ಮಿತೆಯೆಂದು ಕರುನಾಡಿಗೆ ಸಾರಿದರು ಅಭಿಮಾನಿಗಳನ್ನೇ ದೇವರೆಂದು ಕರೆದ ಭಾರತೀಯ ಚಲನಚಿತ್ರದ ಏಕೈಕ ನಟ ಡಾ. ರಾಜಕುಮಾರ್ ಎಂದು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು ಈ ಸಂದರ್ಭದಲ್ಲಿ ಜಿಲ್ಲಾ ಎಮ್ ಆರ್ ಎಚ್ ಎಸ್ ಅಧ್ಯಕ್ಷರಾದ ಹನುಮಂತಪ್ಪ ಮನ್ನಾಪುರ್ ಚಲನಚಿತ್ರ ನಟರಾದ ಭೀಮಶಂಕರ್ ಯಾರಮಸಾ ಳ ಕಾಸಿಂಸಾಬ್ ಕರವೇ ಲಕ್ಷ್ಮಣ್ ಮ ಸರ್ಕಲ್ ಈರಣ್ಣ ಬಸವರಾಜ್ ಶೆಟ್ಟಿ, ಬೂರಪ ಗಬ್ಬುರ್ ಮಲ್ಲಣ್ಣ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ಸಂಘಟನಾ ಕಾರ್ಯದರ್ಶಿಗಳಾದ ಶಿವರಾಜ್ ರುದ್ರಾಕ್ಷಿ ಕನ್ನಡ ಸಾಹಿತ್ಯ ಪರಿಷತ್ತಿನ ಅಜೀವ ಸದಸ್ಯರು ಹಾಗೂ ಕಲಾವಿದರಾದ ರವಿ ರಾಯಚೂರು ಕರ್ ನಾಗರಾಜ್ ಮಸ್ಕಿ ರಂಗನಾಥ್ ಚಲವಾದಿ ತಿರುಪತಿ ಹೇಮನೂರು ಮಲ್ಲಣ್ಣ ಶಂಕರ್ ನಾಗ್ ಆಟೋ ಚಾಲಕರ ಸಂಘದ ಅಧ್ಯಕ್ಷ ರಫಿ ಸೇರಿದಂತೆ ವಿವಿಧ ಸಂಘಟನೆ ಮುಖಂಡರು ಕನ್ನಡಪರ ಸಂಘ ಸಂಸ್ಥೆಗಳ ಮುಖಂಡರು ಕನ್ನಡ ಪ್ರೇಮಿಗಳು ಸಾಹಿತ್ಯ ಆಸಕ್ತರು ಸೇರಿದಂತೆ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು ನಂತರ ರವಿ ರಾಯಚೂರು ಕಾರ್ ನೇತೃತ್ವದಲ್ಲಿ ರಾಜಕುಮಾರ ಅಭಿನಯಿಸಿದ ಚಲನಚಿತ್ರಗಳ ಕನ್ನಡ ಹಾಡುಗಳನ್ನು ಗಾಯಕರಿಂದ ಆಡಿಸಲಾಯಿತು ಭಾಗವಹಿಸಿದ ಚಿತ್ರ ರಸಿಕರು ಮೆಚ್ಚುಗೆ ವ್ಯಕ್ತಪಡಿಸಿದರು

## ಹರಾಜಿನಲ್ಲಿ 21.95 ಲಕ್ಷ ರೂ.ಅದಾಯ ಸಂಗ್ರಹ

ಮಂಗಳಾರತಿ ಹಾಗೂ ಕಾಯಿ ಹೊಡೆಯುವುದಕ್ಕೆ 8 ಲಕ್ಷ 5 ಸಾವಿರ ರೂಗಳಿಗೆ ಹರಾಜಿ ನ ಮೂಲಕ ಪಡೆದುಕೊಂಡಿದ್ದಾರೆ ಜಾತ್ರೆ ಸಮಯದಲ್ಲಿ ಅಂಗಡಿಗಳನ್ನು ಹಾಕುವ ಜಾಗದ ಬಗ್ಗೆ ಯಾರೋಬ್ಬರು ಕೂಡ ಹಾರಾಜಿನಲ್ಲಿ ಭಾಗವಹಿಸದೆ ಇರುವುದರಿಂದ ಕಂದಾಯ ಇಲಾಖೆ ವತಿಯಿಂದ ಜಾಗದ ಶುಲ್ಕವನ್ನು ಸಂಗ್ರಹಿಸಲಾಗುವುದು ಇಂದು ನಡೆದ ಹಾರಾಜಿನಲ್ಲಿ ಒಟ್ಟು 21ಲಕ್ಷದ 95 ಸಾವಿರ ರೂ ಅದಾಯ ಸಂಗ್ರಹವಾಗಿದೆ ಎಂದು ತಿಳಿಸಿದರು.

ಗ್ರೇಡ್–2 ತಹಸೀಲ್ದಾರ್ ಅಬ್ದುಲ್ ವಾಹಿದ್, ಕುರ್ಡಿ ನಾಡತಹಸೀಲ್ದಾರ್ ಅಬ್ದುಲ್ ರಾವೂಫ್,ಕಂದಯ ನರೀಕ್ಷಕರಾದ ಹನುಮಂತಪ್ಪ ಜಲ್ಲಿ ಸೇರಿದಂತೆ ಕಂದಯ ಇಲಾಖೆಯ ಸಿಬ್ಬಂದಿಗಳು ಹಾಗೂ ಅರೋಲಿ ಗ್ರಾಮಸ್ಥಾರು ಇದ್ದರು.

## ವಾರ್ಷಿಕ ವಿಶೇಷ ಶಿಬಿರಕ್ಕೆ ಚಾಲನೆ

ಹಾದಿಯ ಕುರಿತು ಸಮಗ್ರ ಮಾಹಿತಿಯನ್ನು ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಪ್ರಾಚಾರ್ಯರಾದ ಈರಣ್ಣ ಮರ್ಲಟ್ಟಿ ಅವರು ಮಾತನಾಡಿ, “ಎನ್‌ಎಸ್‌ಎಸ್ ಗುರಿ ಮತ್ತು ಉದ್ದೇಶಗಳ ಕುರಿತು ಬೆಳಕು ಚೆಲ್ಲಿದರು.

ಈ ಸಂದರ್ಭದಲ್ಲಿ ಉಪನ್ಯಾಸಕರಾದ ಕುಮಾರಿ ನಾಗರತ್ನ, ದೇವೇಂದ್ರ ಕುಮಾರ್, ಬಸಯ್ಯ ಸ್ವಾಮಿ ಹಾಗೂ ಮಂಜುನಾಥ ನಾಯಕ್ ಸೇರಿದಂತೆ ಕಾಲೇಜಿನ ಇತರ ಉಪನ್ಯಾಸಕರು ಉಪಸ್ಥಿತರಿದ್ದರು. ವಿದ್ಯಾರ್ಥಿ ಅರುಣ್ ಕುಮಾರ್ ನಿರೂಪಿಸಿದರು. ಕೀರ್ತನಾ ಅವರು ಪ್ರಾರ್ಥಿಸಿದರು. ಆಂಜನೇಯ ನಸಲಾಪುರ ಅವರು ಪ್ರತಿಜ್ಞಾವಿಧಿಯನ್ನು ಬೋಧಿಸಿದರು.

# ಭಾರತದ ದಾಳಿಯ ಭಯ, ಪಾ(ಪಿ)ಕಿಗಳ ಎದೆಯಲ್ಲಿ ನಡುಕ ಶುರು, ಹತಾಶೆಯಿಂದ ಕ್ಷಿಪಣಿ ಪರೀಕ್ಷೆ

**ನವದೆಹಲಿ,ಏ.25:** ಭಾರತದ ರಾಜತಾಂತ್ರಿಕ ಕ್ರಮಗಳಿಂದ ಬೆಚ್ಚಿ ಬಿದ್ದಿರುವ ನೆರೆ ರಾಷ್ಟ್ರ ಪಾಕಿಸ್ತಾನ ಭವಿಷ್ಯದಲ್ಲಿ ಸಂಭವಿಸಬಹುದಾದ ದಾಳಿಯನ್ನು ಎದುರಿಸಲು ಅರಬ್ಬಿ ಸಮುದ್ರದಲ್ಲಿ ಕ್ಷಿಪಣಿ ಪರೀಕ್ಷೆಯನ್ನು ನಡೆಸಿದೆ. ಜಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ನರಹತ್ಯೆಗೆ ಪ್ರತೀಕಾರವಾಗಿ ಭಾರತ ಪಾಕಿಸ್ತಾನದ ಮೇಲೆ ವೈಮಾನಿಕ ದಾಳಿ(ಏರ್ ಸ್ಟ್ರೈಕ್), ಸರ್ಜಿಕಲ್ ಸ್ಟ್ರೈಕ್ ಸೇರಿದಂತೆ ಸೇನಾ ಕಾರ್ಯಾಚರಣೆ ನಡೆಸಲು ಸನ್ನದ್ಧವಾಗಿದೆ ಎಂದು ಹೇಳಲಾಗುತ್ತಿದೆ.

ಈ ಬೆಳವಣಿಗೆಗಳಿಂದ ಬೆಚ್ಚಿ ಬಿದ್ದಿರುವ ಪಾಕಿಸ್ತಾನ 480 ಕಿ.ಮೀ ಗುರಿ ಸಾಮರ್ಥ್ಯ ಹೊಂದಿರುವ ಕ್ಷಿಪಣಿ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಿದೆ ಎಂದು ವರದಿಯಾಗಿದೆ.ಕರಾಚಿಯಲ್ಲಿರುವ ಅರಬ್ಬಿ ಸಮುದ್ರದಲ್ಲಿ ಯಶಸ್ವಿಯಾಗಿ ಕ್ಷಿಪಣಿಯನ್ನು ಪರೀಕ್ಷೆ ನಡೆಸಿದ್ದು, ಭಾರತದ ಯಾವುದೇ ದಾಳಿಯನ್ನು ಎದುರಿಸಲು ನಾವು ಸನ್ನದ್ಧರಾಗಿದ್ದೇವೆ ಎಂಬ ಸಂದೇಶ ರವಾನಿಸಲು ಇದನ್ನು ನಡೆಸಲಾಗಿದೆ ಎಂದು ಹೇಳಲಾಗಿದೆ.

ಕರಾಚಿಗೆ ಹೊಂದಿಕೊಂಡಿರುವ ಕರಾವಳಿ ತೀರಪ್ರದೇಶದಲ್ಲಿ ಸತತವಾಗಿ ಪರೀಕ್ಷಾರ್ಥ ಕ್ಷಿಪಣಿ ನಡೆಸುವಂತೆ ಸೇನಾ ಮುಖ್ಯಸ್ಥರು ಸೂಚನೆ ಕೊಟ್ಟಿದ್ದಾರೆ ಎಂದು ತಿಳಿದುಬಂದಿದೆ. ಗುರುವಾರ ಮತ್ತು



ಶುಕ್ರವಾರ ಆರ್ಥಿಕ ವಲಯದೊಳಗೆ ಕ್ಷಿಪಣಿ ಪರೀಕ್ಷೆಯನ್ನು ನಡೆಸುವಂತೆ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಭಾರತದ ಮಿಲಿಟರಿ ಕಾರ್ಯಾಚರಣೆಯ ಪ್ರತಿಯೊಂದು ಬೆಳವಣಿಗೆಗಳ ಮೇಲೆ ತೀವ್ರ ನಿಗಾವಹಿಸಿರುವ ಪಾಕಿಸ್ತಾನ ಭೂಸೇನೆ, ವಾಯುಸೇನೆ ಹಾಗೂ ನೌಕಾ ಸೇನೆಯನ್ನು ಸನ್ನದ್ಧವಾಗಿಟ್ಟಿದೆ. ಈ ಹಿಂದೆ ಭಾರತ ಪಾಕ್ ಆಕ್ರಮಿತ ಕಾಶ್ಮೀರದಲ್ಲಿರುವ ಬಾಲ್‌ಕೋಟ್ ಮೇಲೆ ವೈಮಾನಿಕ ದಾಳಿ ನಡೆಸಿತ್ತು. ಇದರಲ್ಲಿ ನೂರಾರು ಭಯೋತ್ಪಾದಕರು ಸಾವನ್ನಪ್ಪಿದ್ದರು.

**ಸಭೆ ನಡೆಸಿದ ಅಧಿಕಾರಿಗಳು:** ಭಾರತದ ಕ್ರಮಗಳಿಗೆ ಸೂಕ್ತ ಪ್ರತಿಕ್ರಿಯೆ ನೀಡಲು ಪಾಕಿಸ್ತಾನದ ಉನ್ನತ ನಾಗರಿಕ ಸಂಸ್ಥೆಯು ಪ್ರಧಾನಿ ಶಹಬಾಜ್ ಷರೀಫ್ ಅವರ ಅಧ್ಯಕ್ಷತೆಯಲ್ಲಿ ರಾಷ್ಟ್ರಿಯ ಭದ್ರತಾ ಸಮಿತಿಯ ಸಭೆ ನಡೆಸಿದೆ ಎಂದು ಎಂದು ಪಾಕಿಸ್ತಾನ ರಕ್ಷಣಾ ಸಚಿವ ಖ್ವಾಜಾ ಆಸಿಫ್ ತಿಳಿಸಿದ್ದಾರೆ. ಪಾಕಿಸ್ತಾನದ ವಿದೇಶಾಂಗ ಸಚಿವಾಲಯವು ನೀಡಿರುವ ಪ್ರತಿಕ್ರಿಯೆಯಲ್ಲಿ, ಅನಂತನಾಗ್ ಜಿಲ್ಲೆಯಲ್ಲಿ ನಡೆದ ದಾಳಿಯಲ್ಲಿ ಪ್ರವಾಸಿಗರು ಸಾವನ್ನಪ್ಪಿದ ಬಗ್ಗೆ ನಮಗೆ ಬೇಸರವಿದೆ, ಮೃತರ ಕುಟುಂಬಗಳಿಗೆ ನಮ ಸಂತಾಪ ಸೂಚಿಸುತ್ತೇವೆ ಮತ್ತು ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಹಾರೈಸುತ್ತೇವೆ ಎಂದು ಬರೆದಿದ್ದಾರೆ.

# ರಾಜಕುಮಾರ್ ವ್ಯಕ್ತಿಯಲ್ಲ, ನಾಡಿನ ಹೋರಾಟದ ಶಕ್ತಿ

**ಕಲಬುರಗಿ,ಏ.25:** ರಾಜ್ ಕುಮಾರ್ ಕೇವಲ ವ್ಯಕ್ತಿ, ನಟನಷ್ಟೆಯಲ್ಲ.ಅವರೊಬ್ಬ ನಾಡಿನ ಹೋರಾಟದ ಪ್ರತೀಕ ಶಕ್ತಿಯಾಗಿದ್ದಾರೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ವಿಜಯಕುಮಾರ ತೇಗಲತಿಪ್ಪಿ ಹೇಳಿದರು.

ಕಲಬುರಗಿ ಜಿಲ್ಲಾಡಳಿತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಇವುಗಳ ಸಂಯುಕ್ತಾಶ್ರಯದಲ್ಲಿ ಇಲ್ಲಿನ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದ ಕನ್ನಡ ಭವನದ ಸುವರ್ಣ ಸಭಾಭವನದಲ್ಲಿ ಆಯೋಜಿಸಿದ ವರನಟ ಡಾ. ರಾಜಕುಮಾರ್ ಅವರ 97ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಗೋಕಾಕ್ ಸೇರಿದಂತೆ ಕನ್ನಡಪರ ಚಳುವಳಿಯಲ್ಲಿ ಮುಂಚೂಣಿಯಲ್ಲಿ ನಿಲ್ಲುತ್ತಿದ್ದ ನಟ ಸಾರ್ವಭೌಮ ರಾಜ್ ಕುಮಾರ ಅವರ ಭಾಷಾಭಿಮಾನ ನಮಗೆಲ್ಲ ಸ್ಫೂರ್ತಿಯ ಚಿಲುಮೆಯಾಗಿದ್ದು, ಇದುವೇ ನಮಗೆಲ್ಲ ಕನ್ನಡ ಉಳಿಸಿ ಬೆಳೆಸುವ ಶಕ್ತಿ ನೀಡಿದೆ ಎಂದ ಅವರು, ತಮ್ಮಅಭಿನಯದ ಮೂಲಕ ನಾಡಿನ ಪ್ರತಿಯೊಬ್ಬರ ಹೃದಯದಲ್ಲಿ ಡಾ.ರಾಜ್ ಕುಮಾರ್ ಅಮರರಾಗಿದ್ದಾರೆ ಎಂದರು. ಇದಕ್ಕೂ ಮುನ್ನ ಮುತ್ತುರಾಜನ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ವೇದಿಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾಧಿಕಾರಿಗಳ ಕಚೇರಿಯ ಶಿಷ್ಟಾಚಾರ ತಹಶೀಲ್ದಾರ ಪಂಪಯ್ಯ ಮಾತನಾಡಿ, ಡಾ.ರಾಜ್ ಅವರು ಜೀವನದುದ್ದಕ್ಕೂ ಕನ್ನಡ ಚಿತ್ರ ಹೊರತುಪಡಿಸಿ ಬೇರೆ ಸಿನಿಮಾ ಮಾಡಿಲ್ಲ.ಇದು ಅವರ ಭಾಷಾಭಿಮಾನ ತೋರಿಸುತ್ತದೆ. ವೀರಪ್ಪನ್ ಅವರು ಅವರನ್ನು ಅಪಹರಣ ಮಾಡದೆ ಇದ್ದೆ ಡಾ.ರಾಜ್ ಅವರು ಇನ್ನಷ್ಟು ಕಾಲ ನಮ್ಮೊಂದಿಗೆ ಇರುತ್ತಿದ್ದರು ಎಂದರು.



ಗೀತ ಗಾಯನ: ಇದೇ ಸಂದರ್ಭದಲ್ಲಿ ಕಿರಣ ಪಾಟೀಲ ಮತ್ತು ಕಾವೇರಿ ಹಿರೇಮಠ ಅವರುಗಳು ಡಾ. ರಾಜಕುಮಾರ್ ಅಭಿನಯದ ಅನೇಕ ಚಿತ್ರಗೀತೆಗಳು, ವಿಶೇಷವಾಗಿ ಪುನಿತ್ ರಾಜಕುಮಾರ್ ಅಭಿನಯದ “ಬೊಂಬೆ ಹೇಳುತೈತೆ ಮತ್ತೆ ಹೇಳುತೈತೆ ನೀನು ರಾಜಕುಮಾರ” ಹಾಡಿ ಗಾನಸುಧೆ ಹರಿಸಿದರು. ಇದಲ್ಲದೆ ಅನೇಕ ಕನ್ನಡಾಭಿಮಾನಿಗಳು ರಾಜ್ ಅಭಿನಯದ ಕನ್ನಡ ಹಾಡು ರಂಜಿಸಿದರು. ಮೌನಾಚರಣೆ: ಇತ್ತೀಚೆಗೆ ಜಮ್ಮು ಕಾಶ್ಮೀರದ ಅನಂತನಾಗ್ ಜಿಲ್ಲೆಯ ಪಹಲ್ಗಾಂ ನಲ್ಲಿ ಉಗ್ರ ದಾಳಿಯಲ್ಲಿ ಸಾವನಪ್ಪಿದವರ ಆತ್ಮಕ್ಕೆ ಶಾಂತಿ ಕೋರಿ ಎರಡು ನಿಮಿಷ ಮೌನಾಚರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಡಿ.ಕೆ.ರಾಜರತ್ನ, ಡಾ.ರಾಜ್ ಕುಮಾರ ಅಭಿಮಾನಿಗಳ ಸಂಘದ ಜಿಲ್ಲಾಧ್ಯಕ್ಷ ರಾಘವೇಂದ್ರ ವಿ. ಕುಲಕರ್ಣಿ, ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು, ಕನ್ನಡಪರ ಸಂಘಟನೆಗಳ ಮುಖಂಡರು ಹಾಗೂ ಡಾ. ರಾಜಕುಮಾರ್ ಅಭಿಮಾನಿಗಳು ಭಾಗವಹಿಸಿದ್ದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ರವಿ ಮಿರಸ್ಕರ್ ಸ್ವಾಗತಿಸಿದರು. ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಶಿವರಾಜ ಅಂಡಗಿ ನಿರೂಪಿಸಿದರೆ, ಗೌರವ ಕಾರ್ಯದರ್ಶಿ ಧರ್ಮಣ್ಣ ಧನ್ನಿ ವಂದಿಸಿದರು.

# ತಲೆ ಮೇಲೆ ಕಲ್ಲು ಹಾಕಿ ಯುವಕನ ಕೊಲೆ



**ಕಮಲನಗರ:ಏ.25:** ತಾಲ್ಲೂಕಿನ ಚಾಂಡೇಶ್ವರ ಗ್ರಾಮದ ಹೊರವಲಯದ ಖೇಡ್ ರಸ್ತೆ ಬಳಿಯ ಹೊಲದಲ್ಲಿ ತಲೆ ಮೇಲೆ ಕಲ್ಲು ಹಾಕಿ ಯುವಕನ ಕೊಲೆ ಮಾಡಿದ ಘಟನೆ ನಡೆದಿದೆ.

ಚಾಂಡೇಶ್ವರ ಗ್ರಾಮದ ಗಂಗಶೆಟ್ಟಿ ಅಲಿಯಾಸ್ ಸಾಗರ ಧನರಾಜ ಧಭಾಲೆ (26) ಕೊಲೆಯಾದ ಯುವಕ ಎನ್ನಲಾಗಿದೆ. ಕಮಲನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದ್ದು. ತನಿಖೆ ಮುಂದುವರೆದಿದೆ. ಘಟನಾ ಸ್ಥಳಕ್ಕೆ ಭಾಲ್ಕಿ ಡಿವೈಎಸ್ಪಿ ಶಿವಾನಂದ್ ಪವಾಡ ಶೆಟ್ಟಿ, ಕಮಲನಗರ ಸಿಪಿಐ ಅಮರೆಪ್ಪ ಶಿವಬಲ್, ಭಾಲ್ಕಿ ಸಿಪಿಐ ಹಣಮರೆಡ್ಡ್ ಪ್ಪ ಕಮಲನಗರ ಪಿಎ ಚಂದ್ರಶೇಖರ್ ನಿರ್ಣೆ, ಪಿಎ ಬಾಲಾಜಿ ಬೆಳಕಟ್ಟೆ ಹಾಗೂ ಸಿಬ್ಬಂದಿ ಭೇಟಿ ನೀಡಿ ಪರಿಶೀಲಿಸಿದರು.

ಕೊಲೆಗೆ ಖಚಿತ ಕಾರಣ ತಿಳಿದು ಬಂದಿಲ್ಲ.ಆರೋಪಿ ಶೋಧ ಚುರುಕು ಗೊಳಿಸಿದೆ ಎಂದು ಬಲ್ಲ ಮೂಲಗಳಿಂದ ತಿಳಿದುಬಂದಿದೆ.

ಯುವ ಮಾರ್ಗ

ಶುಕ್ರ ವಾರ: 25-04-2025

## ಟೀಮ್ ಇಂಡಿಯಾ ಮುಖ್ಯ ಕೋಚ್ ಗೌತಮ್ ಗಂಭೀರ್‌ಗೆ ಜೀವ ಬೆದರಿಕೆ



**ನವದೆಹಲಿ, ಏ. 25:** ಭಾರತ ಕ್ರಿಕೆಟ್ ತಂಡದ ಮುಖ್ಯ ಕೋಚ್ ಹಾಗೂ ಬಿಜೆಪಿ ಮಾಜಿ ಸಂಸದ ಗೌತಮ್ ಗಂಭೀರ್ ಅವರಿಗೆ ಜೀವ ಬೆದರಿಕೆ ಹಾಕಲಾಗಿದೆ. ಗಂಭೀರ್ ಅವರಿಗೆ ಜೀವ ಬೆದರಿಕೆಯ ಇ-ಮೇಲ್ ಗಳು ಬಂದಿವೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಗಂಭೀರ್ ಅವರಿಗೆ ಎರಡು ಬೆದರಿಕೆ ಮೇಲ್ ಗಳು ಬಂದಿವೆ. ಈ ಬಗ್ಗೆ ರಾಜಿಂದರ್ ನಗರ ಪೊಲೀಸ್ ಠಾಣೆಯಲ್ಲಿ ದೂರು ಸ್ವೀಕರಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ನಾವು ಈ ವಿಷಯದ ಬಗ್ಗೆ ತನಿಖೆಯನ್ನು ಪ್ರಾರಂಭಿಸಿದ್ದೇವೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಕಾಶ್ಮೀರದ ಪಹಲ್ಗಾವ್ ನಲ್ಲಿ ಭಯೋತ್ಪಾದಕರು 26 ಜನರನ್ನು, ಹೆಚ್ಚಾಗಿ ಪ್ರವಾಸಿಗರನ್ನು ಗುಂಡಿಕ್ಕಿ ಕೊಂದ ದಿನವಾದ ಏಪ್ರಿಲ್ 22 ರಂದು ಅನುಮಾನಾಸ್ಪದ ಜಿಮೇಲ್ ಖಾತೆಯ ಮೂಲಕ ಬೆದರಿಕೆಗಳು ಬಂದಿವೆ ಎಂದು ವರದಿಯಾಗಿದೆ. ಗಂಭೀರ್ ಗೆ ಬೆದರಿಕೆ ಹಾಕುತ್ತಿರುವುದು ಇದೇ ಮೊದಲಲ್ಲ. 2022 ರಲ್ಲಿ, ಅವರಿಗೆ ಇದೇ ರೀತಿಯ ಬೆದರಿಕೆಗಳು ಬಂದವು, ಇದು ಅವರ ಭದ್ರತಾ ಕ್ರಮಗಳನ್ನು ಬಿಗಿಗೊಳಿಸಲು ಅಧಿಕಾರಿಗಳನ್ನು ಪ್ರೇರೇಪಿಸಿತು.

## ಭಾರತ ಪ್ರವಾಸ ಮುಗಿಸಿ ಅಮೆರಿಕಾಗೆ ಮರಳಿದ ಉಪಾಧ್ಯಕ್ಷ ವ್ಯಾನ್ಸ್ ಕುಟುಂಬ



**ಜೈಪುರ, ಏ. 25:** ಅಮೆರಿಕದ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ಗುರುವಾರ ತಮ್ಮ ಭಾರತ ಪ್ರವಾಸ ಮುಗಿಸಿ ತಮ್ಮ ದೇಶಕ್ಕೆ ವಾಪಸ್ಸಾದರು. ವ್ಯಾನ್ಸ್, ಅವರ ಪತ್ನಿ ಉಷಾ ವ್ಯಾನ್ಸ್ ಮತ್ತು ಅವರ ಮೂವರು ಮಕ್ಕಳು ಜೈಪುರ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ವಿಶೇಷ ವಿಮಾನದಲ್ಲಿ ವಾಷಿಂಗ್ಟನ್‌ಗೆ ತೆರಳಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ವ್ಯಾನ್ಸ್ ಕುಟುಂಬ ಸೋಮವಾರ ರಾತ್ರಿ ದೆಹಲಿಯಿಂದ ಜೈಪುರಕ್ಕೆ ಆಗಮಿಸಿತು. ರ್ಯಕ್ರಮವೊಂದರಲ್ಲಿ ವ್ಯಾನ್ಸ್ ಭಾರತ-ಯುಎಸ್ ಸಂಬಂಧದ ಬಗ್ಗೆ ಭಾಷಣ ಮಾಡುವ ಮೊದಲು ಅವರು ಅಂಬರ್ ಕೋಟೆಗೆ ಭೇಟಿ ನೀಡಿದ್ದರು. ಜೈಪುರಕ್ಕೆ ಮರಳುವ ಮೊದಲು ಅವರು ಆಗ್ರಾದ ತಾಜ್ ಮಹಲ್ ಗೆ ಭೇಟಿ ನೀಡಿದರು.

ಪ್ರಧಾನಿ ನರೇಂದ್ರ ಮೋದಿಯವರನ್ನು ರಾಜಧಾನಿಯಲ್ಲಿರುವ ಅವರ ನಿವಾಸದಲ್ಲಿ ಭೇಟಿಯಾಗುವ ಮೊದಲು ವ್ಯಾನ್ಸ್ ದೆಹಲಿಯ ಅಕ್ಷರಧಾಮ ದೇವಾಲಯಕ್ಕೆ ಭೇಟಿ ನೀಡುವ ಮೂಲಕ ತಮ್ಮ ಭಾರತ ಪ್ರವಾಸವನ್ನು ಪ್ರಾರಂಭಿಸಿದ್ದರು. ಇದೀಗ ತಮ್ಮ ಮೂರು ದಿನಗಳ ಭಾರತ ಪ್ರವಾಸದಿಂದ ಅವರು ಅಮೆರಿಕಕ್ಕೆ ವಾಪಸ್ಸಾಗಿದ್ದಾರೆ.

## ಪಾಕಿಸ್ತಾನ ಸರ್ಕಾರದ ಅಧಿಕೃತ ಎಕ್ಸ್ ಖಾತೆ ಭಾರತದಲ್ಲಿ ಬಂದ್




**ನವದೆಹಲಿ, ಏ.25–** ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ 26 ಜನರು ಸಾವನ್ನಪ್ಪಿದ ಎರಡು ದಿನಗಳ ನಂತರ ಪಾಕಿಸ್ತಾನ ಸರ್ಕಾರದ ಅಧಿಕೃತ ಎಕ್ಸ್ ಖಾತೆಯನ್ನು ಭಾರತದಲ್ಲಿ ನಿರ್ಬಂಧಿಸಲಾಗಿದೆ.

ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯವು ಭಾರತದಲ್ಲಿ ಪಾಕಿಸ್ತಾನ ಸರ್ಕಾರದ ಅಧಿಕೃತ ಖಾತೆಯನ್ನು ನಿರ್ಬಂಧಿಸುವಂತೆ ಸಾಮಾಜಿಕ ಮಾಧ್ಯಮ ಪ್ಲಾಟ್ಫಾರ್ಮ್ ಎಕ್ಸ್ ಅನ್ನು ವಿನಂತಿಸಿದೆ.

ವಿನಂತಿಗೆ ಅನುಸಾರವಾಗಿ, ಖಾತೆಯನ್ನು ಅಮಾನತುಗೊಳಿಸಲಾಗಿದೆ ಮತ್ತು ಇನ್ನು ಮುಂದೆ ಭಾರತದಲ್ಲಿ ಬಳಕೆದಾರರಿಗೆ ಪ್ರವೇಶಿಸಲಾಗುವುದಿಲ್ಲ.ಪಾಕಿಸ್ತಾನದೊಂದಿಗಿನ ರಾಜತಾಂತ್ರಿಕ ಸಂಬಂಧಗಳನ್ನು ಪರಿಣಾಮಕಾರಿಯಾಗಿ ಕೆಳದರ್ಜೆಗೆ ಇಳಿಸುವುದು, ಪ್ರಮುಖ ಗಡಿ ಮಾರ್ಗಗಳನ್ನು ಮುಚ್ಚುವುದು, ಸಿಂಧೂ ಜಲ ಒಪ್ಪಂದವನ್ನು ಅಮಾನತುಗೊಳಿಸುವುದು ಮತ್ತು ನವದೆಹಲಿಯಲ್ಲಿರುವ ತನ್ನ ಹೈಕಮಿಷನ್ನಿಂದ ಪಾಕಿಸ್ತಾನಿ ಮಿಲಿಟರಿ ಅಧಿಕಾರಿಗಳನ್ನು ಹೊರಹಾಕುವುದು ಸೇರಿದಂತೆ ಪಾಕಿಸ್ತಾನದ ವಿರುದ್ಧ ವ್ಯಾಪಕ ರಾಜತಾಂತ್ರಿಕ ಮತ್ತು ಕಾರ್ಯತಂತ್ರದ ಪ್ರತಿಕ್ರಮಗಳ ಸರಣಿಯನ್ನು ಅನುಸರಿಸಿ ಈ ಕ್ರಮ ಕೈಗೊಳ್ಳಲಾಗಿದೆ.

ಸಾರ್ಕ್ ವೀಸಾ ವಿನಾಯಿತಿ ಯೋಜನೆಯಡಿ ಪಾಕಿಸ್ತಾನಿ ಪ್ರಜೆಗಳು ಭಾರತಕ್ಕೆ ಪ್ರಯಾಣಿಸುವುದನ್ನು ನಿಷೇಧಿಸಲಾಗಿದ್ದು, ಈ ಹಿಂದೆ ನೀಡಲಾದ ಎಲ್ಲಾ ವೀಸಾಗಳನ್ನು ಅನೂರ್ಜಿತವೆಂದು ಘೋಷಿಸಲಾಗಿದೆ. ಈಗಾಗಲೇ ಭಾರತದಲ್ಲಿ ಇರುವವರು 48 ಗಂಟೆಗಳ ಒಳಗೆ ದೇಶವನ್ನು ತೊರೆಯುವಂತೆ ನಿರ್ದೇಶಿಸಲಾಗಿದೆ.

## ನಟಸಾರ್ವಭೌಮ ಡಾ.ರಾಜಕುಮಾರ್ ಹುಟ್ಟುಹಬ್ಬ, ವಿಜೃಂಭಣೆಯಿಂದ ಆಚರಿಸಿದ ಅಭಿಮಾನಿಗಳು



**ಬೆಂಗಳೂರು,ಏ.25–** ಕನ್ನಡ ಸುಪುತ್ರ, ವರನಟ ಡಾ.ರಾಜ್ ಕುಮಾರ್ ಹುಟ್ಟುಹಬ್ಬ ಎಂದರೆ ಕನ್ನಡಿಗರಿಗೆ, ಕನ್ನಡ ಕಲಾರಸಿಕರಿಗೆ ಎಲ್ಲಿಲ್ಲದ ಸಂತೋಷ. ತಮ್ಮ ಹುಟ್ಟುಹಬ್ಬಗಳಿಗಿಂತ ಹೆಚ್ಚು ವಿಜೃಂಭಣೆಯಿಂದ ಆಚರಿಸುತ್ತಾರೆ. ಈ ಮೇರು ನಟನನ್ನ ಇಂದಿಗೂ ಹೃದಯಗಳಲ್ಲಿ ಆರಾಧಿಸುತ್ತಿದ್ದಾರೆ.

ಇಂದು ನಟಸಾರ್ವಭೌಮನ 96ನೇ ಜನ್ಮದಿನದ ಹೊತ್ತಿನಲ್ಲಿ ಅವರ ಅಭಿಮಾನಿ ದೇವರುಗಳು, ನೇತ್ರದಾನ, ರಕ್ತದಾನ, ಅನ್ನದಾನದಂತಹ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಅಭಿಮಾನ ಮೆರೆದಿದ್ದಾರೆ. ಅವರು ಆಗಲಿದ ದಿನದಿಂದ ಕೆಲ ಅಭಿಮಾನಿಗಳು ಕೂದಲು ಬಿಡದೆ ತಲೆಬೋಳಿಸಿಕೊಂಡು ಓಡಾಡುತ್ತಿದ್ದರೆ, ಮತ್ತೆ ಕೆಲವರು ರಾಜ್ ಅಭಿನಯಿಸಿದ ಅಷ್ಟೂ ಚಿತ್ರಗಳನ್ನು ಕಂಠಪಾಠ ಮಾಡಿ ಹೇಳುತ್ತಾರೆ. ದೇವರ ಮನೆಯಲ್ಲಿ ದೇವರ ಫೋಟೋಗಳು ಜೊತೆ ಅಣ್ಣಾವ್ರ ಫೋಟೋ ಇರಿಸಿ ಪ್ರತಿದಿನ ಪೂಜೆ ಮಾಡುವ ಲಕ್ಷಾಂತರ ಅಭಿಮಾನಿಗಳು ಇಂದಿಗೂ ಇದ್ದಾರೆ.

ನಮ್ಮ ಕನ್ನಡ ನಾಡು, ಭಾಷೆ ಮತ್ತು ಕಲಾಪ್ರಪಂಚದ ರಾಯಭಾರಿ. ಸದಾ ಕನ್ನಡಕ್ಕಾಗಿ ಮಿಡಿಯುತ್ತಿದ್ದ ಹೃದಯ. ಇತಿಹಾಸ ಕಂಡುಕೇಳರಿಯದ ಗೋಕಾಕ್ ಚಳವಳಿಯಂತಹ ದೊಡ್ಡ ಕನ್ನಡಪರ ಚಳವಳಿಯನ್ನು ಮಾಡಿ ಕನ್ನಡಿಗರ ಎದೆಯಲ್ಲಿ ಕನ್ನಡತನವನ್ನು ಎಬ್ಬಿಸಿದ ಕನ್ನಡದ ಸಂತ.

ಕಲಾತಾಯಿಯನ್ನು ವಶೀಕರಣ ಮಾಡಿಕೊಂಡು ಕಲಾ ಸಾಮ್ರಾಜ್ಯವನ್ನು ಆಳಿದ ಕಲಾ ಸಾಮ್ರಾಟ, ಕಲೆಯ ಉತ್ತುಂಗದ ಶಿಖರವೇರಿ ಕಲಾ ಸರಸ್ವತಿಯನ್ನು ದರ್ಶನ ಮಾಡಿ ಬಂದ ಏಕಮಾತ್ರ ನಟ.ನಟರಾಗಿ ಹೇಳುವುದಾದರೆ ನಿರಂತರವಾಗಿ ರೂಢಿಸಿಕೊಂಡಿದ್ದ ಅವರ ಕಲಿಕೆಯ ಮನೋಧರ್ಮ. ಅವರಿಗಿದ್ದ ಅನುಭವದಲ್ಲಿ ಯಾರನ್ನೂ ಬೇಕಾದರೂ ನಿರ್ದೇಶನ ಮಾಡಬಹುದಿತ್ತು. ಅವರಿಗಿದ್ದ ಕಲಿಕೆಯಿಂದ ಯಾವ ದೃಶ್ಯವನ್ನು ಬೇಕಾದರೂ ತಮಗೆ ಬೇಕಾದಂತೆ ಮಾಡಬಹುದಿತ್ತು. ಅವರಿಗಿದ್ದ ಸೌಕರ್ಯಗಳಿಂದ ಏನನ್ನೂ ಬೇಕಾದರೂ ಪಡೆಯಬಹುದಿತ್ತು. ಆದರೆ ರಾಜ್ ಕುಮಾರ್ ಆದ್ಯಾವುದನ್ನೂ ಪಡೆಯಲಿಲ್ಲ.

ಅವರ ಮಾತಿನಲ್ಲೇ ಹೇಳುವುದಾದರೆ ಪಾತ್ರ ನನ್ನ ಚಿತ್ ಮಾಡಬೇಕೇ ಹೊರತು, ನಾನು ಪಾತ್ರವನ್ನು ಚಿತ್ ಮಾಡುವುದಲ್ಲ, ನಟ ಪಾತ್ರವನ್ನು ಸೋಲಿಸಬಾರದು, ಪಾತ್ರವೇ ನಟನನ್ನು ಸೋಲಿಸಬೇಕು. ಪಾತ್ರವೇ ಹಿರಿದಾಗಿ ಕಂಡು, ಆ ಪಾತ್ರಧಾರಿ ಮರೆಯಾಗಬೇಕು. ನಟ. ಪಾತ್ರಕ್ಕೆ ಮಿಗಿಲಾದವನು ಅಲ್ಲ ಎಂಬುದು ಅವರ ನಂಬಿಕೆ. ರಾಜ್ ತೋರಿದ ಈ ಮನೋಧರ್ಮ ಈಗಿನ ನಟರು ಅಳವಡಿಸಿಕೊಂಡರೆ ಸಾಕು.

ರಾಜ್ ಕುಮಾರ್ ಅವರು ಯಾವತ್ತೂ ನನ್ನ ಕೆಲಸ ಅಂದಿಲ್ಲ. ನಮ್ಮ ಕೆಲಸ ಅಂದರು. ಶೂಟಿಂಗ್ ಸೆಟ್ ನಲ್ಲಿ ಎಲ್ಲರ ಜತೆ ಕೂರುತ್ತಿದ್ದರು. ಒಟ್ಟಿಗೆ ಊಟ ಮಾಡುತ್ತಿದ್ದರು. ಕಷ್ಟ- ಸುಖ ಕೇಳುತ್ತಿದ್ದರು. ಅನ್ಯೋನ್ಯತೆ- ಸಂಬಂಧ, ಸ್ನೇಹ ಬೆಳೆಸುತ್ತಿದ್ದರು. ಸಿನಿಮಾ ಒಂದು ತಂಡದ ಸಾಧನೆ ಹೊರತು, ಒಬ್ಬ ವ್ಯಕ್ತಿಯ ಕೆಲಸ ಅಂದುಕೊಂಡಿದ್ದರು. ಅವರಿಗೆ ಇದ್ದ ಈ ತಂಡದ ಸ್ಫೂರ್ತಿ, ವಿನಮ್ರತೆ, ಶಿಸ್ತು ಈಗಿನ ಚಿತ್ರರಂಗಕ್ಕೆ ಅಣ್ಣಾವ್ರ ಈ ಪಾಠ-ನಡೆ ಕೂಡ ಅತ್ಯಗತ್ಯ.

ರಾಜ್ ಕನ್ನಡ ನಾಡಿನ ಸಾಂಸ್ಕೃತಿಕ ಶಕ್ತಿಯಾಗಿ ಬೆಳೆದುದರ ಹಿಂದೆ ಅವರ ಅಭಿಮಾನಿಗಳ ಬಲವಿದೆ. ವರನಟನ ಮೇಲಿನ ಅಭಿಮಾನವನ್ನೇ ಉಸಿರಾಗಿಸಿಕೊಂಡು ಬದುಕುತ್ತಿರುವ ಹಲವು ಜೀವಗಳು ನಮ್ಮ ನಡುವೆ ಇವೆ. ಇಂದು ರಾಜ್ ಕುಟುಂಬದ ಎಲ್ಲರೂ ಕಂಠೀರವ ಸ್ಟುಡಿಯೋ ಬಳಿಯಿರುವ ಅಣ್ಣಾವ್ರ ಸಮಾಧಿ ಬಳಿ ತೆರಳಿ ಪೂಜೆ ಸಲ್ಲಿಸಿದ್ದಾರೆ. ಸಾವಿರಾರು ಅಭಿಮಾನಿಗಳು ಕುಟುಂಬದವರೊಂದಿಗೆ ಪೂಜೆಯಲ್ಲಿ ಪಾಲ್ಗೊಂಡಿದ್ದರು.

## ಏ.27 ಉಚಿತ ಕೃತಕ ಅಗಾಂಗ ಜೋಡಣೆ ಶಿಬಿರ



**ಬೆಂಗಳೂರು, ಏ, 25;** ಮಾನವೀಯ ಸೇವೆಗೆ ಹೆಸರಾದ ನಾರಾಯಣ ಸೇವಾ ಸಂಸ್ಥಾನದಿಂದ ಏಪ್ರಿಲ್ 27 ರ ಭಾನುವಾರ ಸತತ ಮೂರನೇ ವರ್ಷ ಬೆಂಗಳೂರಿನಲ್ಲಿ ಉಚಿತ ನಾರಾಯಣ್ ಉಚಿತ ಕೃತಕ ಅಂಗಾಂಗ ಮತ್ತು ಕ್ಯಾಲಿಪರ್ ಜೋಡಣಾ ಶಿಬಿರ ಮತ್ತು ಅಂತರರಾಷ್ಟ್ರೀಯ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಆಯೋಜಿಸಲಾಗಿದೆ.

ಬಸವನಗುಡಿಯ ಬುಲ್ ಟೆಂಪಲ್ ರಸ್ತೆಯ ಮರಾಠಾ ಹಾಸ್ಟೆಲ್ ಮೈದಾನದಲ್ಲಿ ಬೆಳಿಗ್ಗೆ 8:00 ರಿಂದ ಸಂಜೆ 5:00 ರವರೆಗೆ ನಡೆಯಲಿದ್ದು, ಅಲ್ಲಿ ಮೊದಲೇ ನೋಂದಾಯಿಸಿಕೊಂಡ ಅಂಗವಿಕಲ ವ್ಯಕ್ತಿಗಳಿಗೆ ಮಾತ್ರ ಉಚಿತ ಕೃತಕ ಅಂಗಗಳನ್ನು ಜೋಡಿಸಲಾಗುತ್ತದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬೆಂಗಳೂರು ಶಾಖೆಯ ಮುಖ್ಯಸ್ಥ ವಿನೋದ್ ಜೈನ್, ನಾರಾಯಣ ಸೇವಾ ಸಂಸ್ಥಾನ ಕಳೆದ 40 ವರ್ಷಗಳಿಂದ ಕೆಲಸ ಮಾಡುತ್ತಿದೆ. ಫೆಬ್ರವರಿ 2 ರಂದು ಬೆಂಗಳೂರಿನಲ್ಲಿ 1,050 ಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದರು. ಅವರಲ್ಲಿ 694 ವ್ಯಕ್ತಿಗಳು ರಸ್ತೆ ಅಥವಾ ಇತರ ಅಪಘಾತಗಳಿಂದಾಗಿ ಕೈಕಾಲುಗಳನ್ನು ಕಳೆದುಕೊಂಡಿದ್ದರು. ಈ ವ್ಯಕ್ತಿಗಳಿಗೆ ಇದೀಗ ಅಂಗಾಂಗ ಜೋಡಿಸಲಾಗುತ್ತಿದೆ ಎಂದರು. ಜರ್ಮನ್ ತಂತ್ರಜ್ಞಾನದಿಂದ ತಯಾರಿಸಿದ ನಾರಾಯಣ್ ಲಿಂಬ್ಸ್ ಅಳವಡಿಸಲಾಗುವುದು. ಇದು ಅವರಿಗೆ ಹೊಸ ಜೀವನವನ್ನು ನೀಡಲಿದೆ.

## ಸಿದ್ಧಾರ್ಥ್ ಮಲ್ಹೋತ್ರಾ ಕೋಪಕ್ಕೆ ಪಾಪರಾಜಿಗಳು ಗುರಿ



**ಮುಂಬೈ,ಏ.25–**ಬಾಲಿವುಡ್‌ನ ನೆಚ್ಚಿನ ದಂಪತಿಗಳಾದ ಕಿಯಾರಾ ಅಡ್ವಾಣಿ ಮತ್ತು ಸಿದ್ಧಾರ್ಥ್ ಮಲ್ಹೋತ್ರಾ ಇತ್ತೀಚಿನ ದಿನಗಳಲ್ಲಿ ತಮ್ಮ ಜೀವನದ ಅತ್ಯಂತ ಸುಂದರ ಹಂತದಲ್ಲಿದ್ದಾರೆ. ಈ ದಂಪತಿಗಳು ಶೀಘ್ರದಲ್ಲೇ ಪೋಷಕರಾಗಲಿದ್ದಾರೆ. ಕಿಯಾರಾ ತನ್ನ ಗರ್ಭಧಾರಣೆಯ ಪ್ರಯಾಣದ ಬಗ್ಗೆ ತುಂಬಾ ಜಾಗರೂಕರಾಗಿದ್ದಾರೆ, ಸಿದ್ಧಾರ್ಥ್ ತನ್ನ ಬಿಡುವಿಲ್ಲದ ಶೂಟಿಂಗ್ ವೇಳಾಪಟ್ಟಿಯ ಹೊರತಾಗಿಯೂ ತನ್ನ ಪತ್ನಿಯ ಆರೋಗ್ಯ ಕುರಿತು ಗಮನ ನೀಡುತ್ತಿದ್ದಾರೆ ಇತ್ತೀಚೆಗೆ ಇಬ್ಬರೂ ಮುಂಬೈನ ಕ್ಲಿನಿಕ್ ಹೊರಗೆ ಕಾಣಿಸಿಕೊಂಡಿದ್ದಾರೆ, ಅಲ್ಲಿ ನಟ ಪಾಪರಾಜಿಗಳ ಮೇಲೆ ಕೋಪಗೊಂಡಿರುವ ವಿಡಿಯೋ ವೈರಲ್ ಆಗಿದೆ.

ಸಿದ್ಧಾರ್ಥ್ ಮತ್ತು ಕಿಯಾರಾ ಅವರ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗುತ್ತಿದೆ. ಇದರಲ್ಲಿ ಸಿದ್ಧಾರ್ಥ್ ಮಲ್ಹೋತ್ರಾ ಪಾಪರಾಜಿಗಳ ಮೇಲೆ ಕೋಪಗೊಳ್ಳುತ್ತಿರುವುದು ಕಂಡುಬರುತ್ತದೆ. ಕಾಣಿಸಿಕೊಂಡಿರುವ ವೀಡಿಯೊದಲ್ಲಿ, ಕಿಯಾರಾ ತನ್ನ ಕಾರಿನಲ್ಲಿ ಕುಳಿತಿದ್ದಾಳೆ. ಪಾಪರಾಜಿಗಳು ಅವಳ ಚಿತ್ರಗಳನ್ನು ತೆಗೆದುಕೊಳ್ಳಲು ಪ್ರಯತ್ನಿಸು ತ್ತಿದ್ದಾರೆ. ಈ ವೀಡಿಯೊದಲ್ಲಿ, ಕಿಯಾರಾ ತನ್ನ ಮುಖವನ್ನು ಕೈಗಳಿಂದ ಮುಚ್ಚಿಕೊಂಡಿರುವುದು ಕಂಡುಬಂದಿದೆ. ಅಷ್ಟರಲ್ಲಿ ಸಿದ್ಧಾರ್ಥ್ ಬಂದಿರುವ ದೃಶ್ಯವಿದೆ ವೀಡಿಯೊದಲ್ಲಿ ಸಿದ್ಧಾರ್ಥ್ ಪಾಪರಾಜಿಗಳ ಕೃತ್ಯಕ್ಕೆ ಕೋಪ ವ್ಯಕ್ತಪಡಿಸಿದ್ದಾರೆ .ಅವರು ಪಾಪರಾಜಿಗಳಿಗೆ ಹಿಂದೆ ಸರಿಯಲು ಹೇಳಿ ಸರಿಯಾಗಿ ವರ್ತಿಸುವಂತೆ ಎಚ್ಚರಿಕೆ ನೀಡಿದ್ದಾರೆ.

ಸಿದ್ಧಾರ್ಥ್ ಶೂಟಿಂಗ್ ಸ್ಥಳ ಎಷ್ಟೇ ದೂರದಲ್ಲಿದ್ದರೂ, ನಟ ಕಿಯಾರಾ ಜೊತೆ ಸಾಧ್ಯವಾದಷ್ಟು ಸಮಯ ಕಳೆಯಲು ಎಲ್ಲ ಪ್ರಯತ್ನಗಳನ್ನು ಮಾಡುತ್ತಿದ್ದಾರೆ. ಸಿದ್ಧಾರ್ಥ್ ಶೂಟಿಂಗ್‌ನಿಂದ ಮುಕ್ತರಾದ ತಕ್ಷಣ ಮನೆಗೆ ಮರಳುತ್ತಾರೆ, ಇದರಿಂದಾಗಿ ಅವರು ತಮ್ಮ ಪತ್ನಿಯ ಆರೋಗ್ಯ ಮತ್ತು ಭಾವನಾತ್ಮಕ ಬೆಂಬಲವನ್ನು ಸಂಪೂರ್ಣವಾಗಿ ನೀಡಿದ್ದಾರೆ. ಕಿಯಾರಾ ಗರ್ಭಧಾರಣೆಯ ಕಾರಣದಿಂದಾಗಿ ಫರ್ಹಾನ್ ಅಖ್ತರ್ ಅವರ ಡಾನ್ 3 ಚಿತ್ರದಿಂದ ದೂರ ಉಳಿದಿದ್ದಾರೆ . ನಟಿ ತನ್ನ ಕುಟುಂಬ ಮತ್ತು ತನ್ನ ಭವಿಷ್ಯದ ಮಗುವಿನ ಮೇಲೆ ಮಾತ್ರ ಗಮನ ಹರಿಸಲು ಬಯಸುತ್ತಿದ್ದಾರೆ ಎನ್ನಲಾಗಿದೆ.

ಇತ್ತೀಚೆಗೆ, ಅವರು ಮುಂಬೈನ ಐಷಾರಾಮಿ ಪ್ರದೇಶದಲ್ಲಿ ಹೊಸ ಮನೆಯನ್ನು ಖರೀದಿಸಿದ್ದಾರೆ, ಅಲ್ಲಿ ಅವರು ಮಗುವನ್ನು ಸ್ವಾಗತಿಸಲು ಸಿದ್ಧತೆಗಳನ್ನು ಸಹ ಪ್ರಾರಂಭಿಸಿದ್ದಾರೆ. ಮುಂಬೈನ ಪ್ರಸಿದ್ಧ ಆಸ್ಪತ್ರೆಯ ಹೊರಗೆ ಇಬ್ಬರೂ ಆಗಾಗ್ಗೆ ಕಾಣಿಸಿಕೊಂಡಿದ್ದಾರೆ, ಅಲ್ಲಿ ಕಿಯಾರಾ ನಿಯಮಿತ ತಪಾಸಣೆಗೆ ಹೋಗುತ್ತಾರೆ ಎನ್ನಲಾಗಿದೆ.

## ಕಾಶ್ಮೀರದ ಉಧಂಪುರದಲ್ಲಿ ಗುಂಡಿನ ಚಕಮಕಿ, ಯೋಧ ಹುತಾತ್ಮ

**ಶ್ರೀನಗರ, ಏ.25–** ಜಮ್ಮು ಮತ್ತು ಕಾಶ್ಮೀರದ ಉಧಂಪುರದಲ್ಲಿ ಭದ್ರತಾ ಪಡೆಗಳು ಮತ್ತು ಭಯೋತ್ಪಾದಕರ ನಡುವೆ ನಡೆದ ಗುಂಡಿನ ಚಕಮಕಿ ಯಲ್ಲಿ ಯೋಧ ಹುತಾತ್ಮರಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಭಯೋತ್ಪಾದಕರ ಉಪಸ್ಥಿತಿಯ ಬಗ್ಗೆ ಮಾಹಿತಿಯ ಆಧಾರದ ಮೇಲೆ ಪ್ರಾರಂಭಿಸಲಾದ ಕಾರ್ಡನ್ ಮತ್ತು ಶೋಧ ಕಾರ್ಯಾಚರಣೆಯ ಸಮಯದಲ್ಲಿ ದುಡು-ಬಸಂತ್‌ಗರ್ ಪ್ರದೇಶದಲ್ಲಿ ಗುಂಡಿನ ದಾಳಿ ನಡೆದಿದೆ ಎಂದು ಅವರು ಹೇಳಿದರು.

ನಿರ್ದಿಷ್ಟ ಗುಪ್ತಚರ ಮಾಹಿತಿಯ ಆಧಾರದ ಮೇಲೆ, ಜಮ್ಮು ಮತ್ತು ಕಾಶ್ಮೀರ ಪೊಲೀಸರೊಂದಿಗೆ ಜಂಟಿ ಕಾರ್ಯಾಚರಣೆಯನ್ನು ಇಂದು ಉಧಂಪುರದ ಬಸಂತ್‌ಗಢದಲ್ಲಿ ಪ್ರಾರಂಭಿಸಲಾಯಿತು. ಉಗ್ರರೊ ಂದಿಗೆ ಸಂಪರ್ಕವನ್ನು ಸ್ಥಾಪಿಸಲಾ ಯಿತು ಮತ್ತು ಭೀಕರ ಗುಂಡಿನ ಚಕಮಕಿ ನಡೆಯಿತು. ಆರಂಭಿಕ ವಿನಿಮಯದಲ್ಲಿ ನಮ್ಮ ಧೈರ್ಯಶಾ ಲಿಗಳಲ್ಲಿ ಒಬ್ಬರು ತೀವ್ರವಾಗಿ ಗಾಯಗೊಂಡರು ಮತ್ತು ನಂತರ ಉತ್ತಮ ವೈದ್ಯಕೀಯ ಪ್ರಯತ್ನಗಳ ಹೊರತಾಗಿಯೂ ನಿಧನರಾದರು ಎಂದು ಸೇನೆಯ ಜಮು ಮೂಲದ ವೈಟ್ ನೈಟ್ ಕಾಪ್ಸ್ 9 ಎಕ್ಸ್‌ನಲ್ಲಿ ಪೋಸ್ಟ್ ಮಾಡಿದೆ.

## ಎಫ್‌ಐಐಟಿ ಜೆಇಇ ಕೇಂದ್ರದ ಮೇಲೆ ಇಡಿ ದಾಳಿ




**ನವದೆಹಲಿ, ಏ. 25:** ಕೋಚಿಂಗ್ 'ಇನ್ಸಿಟ್ಯೂಟ್ ಇನಿ. ಎಫ್‌ಐಐಟಿ ಜೆಇಇ ವಿರುದ್ಧ ಅಕ್ರಮ ಹಣ ವರ್ಗಾವಣೆ ತನಿಖೆಯ ಭಾಗವಾಗಿ ಜಾರಿ ನಿರ್ದೇಶನಾಲಯವು ದಿಲ್ಲಿ-ಎನ್‌ಸಿಆರ್‌ನ ಹಲವು ಸ್ಥಳಗಳ ಮೇಲೆ ಗುರುವಾರ ದಾಳಿ ನಡೆಸಿದೆ.

ಕೋಚಿಂಗ್ ಇನ್ಸಿಟ್ಯೂಟ್‌ನ ಪ್ರವರ್ತಕರು ಸೇರಿದಂತೆ ದೆಹಲಿ ಮತ್ತು ನೆರೆಯ ನೋಯ್ಡಾ ಮತ್ತು ಗುರುಗ್ರಾಮದ ಸ್ಥಳಗಳಲ್ಲಿ ಶೋಧ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮನಿ ಲಾಂಡರಿಂಗ್ ತಡೆ ಕಾಯ್ದೆ (ಪಿಎಂಎಲ್‌ಎ) ಅಡಿಯಲ್ಲಿ ಈ ಕ್ರಮ ಕೈಗೊಳ್ಳಲಾಗುತ್ತಿದೆ.

ಎಫ್‌ಐಐಟಿ ಜೆಇಇ ಕೇಂದ್ರಗಳು ಇದ್ದಕ್ಕಿದ್ದಂತೆ ಮುಚ್ಚಲ್ಪಟ್ಟಿವೆ ಮತ್ತು ತಮ್ಮ ಮಕ್ಕಳನ್ನು ಮೂಲೆಗುಂಪು ಮಾಡಿವೆ ಎಂದು ಕೆಲವು ಪೋಷಕರು ಜನವರಿ ಯಲ್ಲಿ ನೀಡಿದ ದೂರಿನ ಮೇರೆಗೆ ನೋಯ್ಡಾ ಮತ್ತು ದೆಹಲಿ ಪೊಲೀಸರು ದಾಖಲಿಸಿ ದ ಎಫ್‌ಐಆರ್‌ಗಳ ಆಧಾರದ ಮೇಲೆ ಈ ಪ್ರಕರಣ. ಹುಟ್ಟಿ ಕೊಂಡಿದೆ ಎಂದು ಅಧಿಕಾರಿ ಗಳು ತಿಳಿಸಿದ್ದಾರೆ.

ಪೋಷಕರು ಲಕ್ಷಾಂತರ ರೂಪಾಯಿಗಳನ್ನು ಶುಲ್ಕವಾಗಿ ಠೇವಣಿ ಇಟ್ಟರು ಆದರೆ ಅವರಿಗೆ ಯಾವುದೇ ಸೇವೆ ಅಥವಾ ಮರುಪಾವತಿ ಸಿಗಲಿಲ್ಲ ಎಂದು ಅವರು ಹೇಳಿದರು. ಎಫ್‌ಐಐಟಿ ಜೆಇಇ ಎಂಜಿನಿಯರಿಂಗ್ ಆಕಾಂಕ್ಷಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡುತ್ತದೆ ಮತ್ತು ದೇಶಾದ್ಯಂತ 73 ಕೇಂದ್ರಗಳನ್ನು ಹೊಂದಿದೆ.

## ಬೆಂಗಳೂರಲ್ಲಿ ಅನಧಿಕೃತ ಜಾಹೀರಾತು ತೆರವಿಗಾಗಿ ಎಸ್‌ಓಪಿ ಆದೇಶ ಜಾರಿ



**ಬೆಂಗಳೂರು, ಏ.25–** ನಗರದಲ್ಲಿ ಅನಧಿಕೃತ ಜಾಹಿರಾತುಗಳ ತೆರವಿಗಾಗಿ ಪರಿಷ್ಕೃತ ಕಾರ್ಯಾಚರಣಾ ವಿಧಾನ ಆದೇಶವನ್ನು ಜಾರಿಗೊಳಿಸಲಾಗಿದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದ್ದಾರೆ. ನಗರದಲ್ಲಿ ಅನಧಿಕೃತ ಫ್ಲೆಕ್ಸ್, ಬ್ಯಾನರ್‌ಗಳ ಅಳವಡಿಕೆ ಹೆಚ್ಚಾಗುತ್ತಿದ್ದು, ಬಿಬಿಎಂಪಿ ಜಾಹೀರಾತು ನಿಯಂತ್ರಣ ತಂಡ ರಚಿಸಲು ವಲಯ ಆಯುಕ್ತರಿಗೆ ಸೂಚನೆ ನೀಡಲಾಗಿದೆ.ಜಾಹಿರಾತು ಪ್ರದರ್ಶನ ಕುರಿತು ದೂರುಗಳನ್ನು ಸ್ವಿಕರಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರ ಕಚೇರಿಯಲ್ಲಿ ನಿಯಂತ್ರಣ ಕೊಠಡಿಗಳನ್ನು ತೆರೆಯಲು ಸೂಚಿಸಲಾಗಿದೆ ಎಂದರು.

ಬಿಬಿಎಂಪಿ ಕಾಯ್ದೆ 2020ರ ಸೆಕ್ಷನ್ 158ರಂತೆ ಪಾಲಿಕೆಯ ವ್ಯಾಪ್ತಿಯಲ್ಲಿನ ಯಾವುದೇ ಕಟ್ಟಡ, ಗೋಡೆ ಅಥವಾ ಯಾವುದೇ ಸಾರ್ವಜನಿಕ ಸ್ಥಳಗಳಲ್ಲಿ ಮುಖ್ಯ ಆಯುಕ್ತರ ಲಿಖಿತ ಅನುಮತಿಯಿಲ್ಲದೆ ಯಾವುದೇ ರೀತಿಯ ಜಾಹೀರಾತುಗಳನ್ನು ಪ್ರದರ್ಶಿಸುವುದನ್ನು ನಿಷೇಧಿಸಲಾಗಿದೆ. ಮುಂದುವರೆದು, ಬಿಬಿಎಂಪಿ ಕಾಯ್ದೆ 2020 ರ ಸೆಕ್ಷನ್ 158ರಂತೆ ಮುಖ್ಯ ಆಯುಕ್ತರ ಲಿಖಿತ ಅನುಮತಿ ಸಲ್ಲಿಸದೇ ಹೊರತು ಯಾವುದೇ ಜಾಹೀರಾತು ಪ್ರದರ್ಶನಕ್ಕೆ ಸಂಬಂಧಿಸಿದಂತೆ ಮುದ್ರಣವನ್ನು ಮುದ್ರಿಸದಂತೆ ವಲಯ ಆಯುಕ್ತರುಗಳು ಈಗಾಗಲೇ ಬಿಬಿಎಂಪಿ ಕಾಯ್ದೆ 2020ರ ಸೆಕ್ಷನ್ 307ರನ್ವಯ ವ್ಯಾಪಾರ ಪರವಾನಗಿಯ ನಿಯಮಗಳು ಮತ್ತು ಷರತ್ತುಗಳನ್ನು ಸೂಚಿಸಿ ಆದೇಶವನ್ನು ಹೊರಡಿಸಿರುತ್ತಾರೆ.

ಬೆಂಗಳೂರು ನಗರದಲ್ಲಿ ಅನಧಿಕೃತ ಫ್ಲೆಕ್ಸ್, ಬ್ಯಾನರ್, ಕಟೌಟ್ ಹಾಗೂ ಇನ್ನಿತರೆ ಜಾಹೀರಾತು ಪ್ರದರ್ಶನಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಈ ಹಿಂದೆ ಉಲ್ಲೇಖ(1) ರಲ್ಲಿ ಹೊರಡಿಸಲಾಗಿದ್ದ ಪ್ರಮಾಣಿತ ಕಾರ್ಯಾಚರಣಾ ವಿಧಾನವನ್ನು ಹಿಂಪಡೆದು ಪರಿಷ್ಕೃತ ಪ್ರಮಾಣಿತ ಕಾರ್ಯಾಚರಣಾ ವಿಧಾನವನ್ನು ಹೊರಡಿಸಲಾಗಿದೆ. ವಲಯ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಅಳವಡಿಸಲಾಗಿರುವ ಫ್ಲೆಕ್ಸ್, ಬ್ಯಾನರ್, ಕಟೌಟ್ ಹಾಗೂ ಇನ್ನಿತರೆ ಜಾಹೀರಾತು ಪ್ರದರ್ಶನಗಳನ್ನು ತೆರುವಗೊಳಿಸಲು, ಮಾರ್ಷಲ್ ಮತ್ತು ಪ್ರಹರಿಯವರ ಸಹಯೋಗದೊಂದಿಗೆ ಕಿರಿಯ ಅಭಿಯಂತರರು, ಸಹಾಯಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರುಗಳ ತಂಡಗಳನ್ನು (ಬಿಬಿಎಂಪಿ ಜಾಹೀರಾತು ನಿಯಂತ್ರಣ ತಂಡ) ವಲಯ ಆಯುಕ್ತರು ರಚಿಸತಕ್ಕದ್ದು.

ಅನಧಿಕೃತವಾಗಿ ಫ್ಲೆಕ್ಸ್, ಬ್ಯಾನರ್ ಕಟೌಟ್ ಹಾಗೂ ಇನ್ನಿತರೆ ಜಾಹೀರಾತುಗಳನ್ನು ತೆಗೆದುಹಾಕುವ ಹಾಗೂ ಅನಧಿಕೃತವಾಗಿ ಅಳವಡಿಸಲಾಗಿರುವವರ ವಿರುದ್ಧ ಸಂಬಂಧಪಟ್ಟ ಪೊಲೀಸ್ ಠಾಣೆಯಲ್ಲಿ ಪ್ರಥಮ ವರ್ತಮಾನ ವರದಿ (ಎಫ್‌ಐಆರ್) ದಾಖಲಿಸುವ ಹಾಗೂ ದಂಡ ವಿಧಿಸುವ ಕಾರ್ಯದ ಮೇಲ್ವಿಚಾರಣೆ ಮಾಡುವ ಅಧಿಕಾರವನ್ನು ಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ರವರಿಗೆ ನೀಡಲಾಗಿದೆ.

ಯುವ ಮಾರ್ಗ

ಶುಕ್ರವಾರ: 25–04–2025

# ಭಾರತ ಸಿಂಧೂ ಜಲ ಒಪ್ಪಂದ ಸ್ಥಗಿತಗೊಳಿಸಿದ ಬೆನ್ನಲ್ಲೇ ಪಾಕಿಸ್ತಾನ ಉನ್ನತ ಮಟ್ಟದ ಭದ್ರತಾ ಸಭೆ



**ಇಸ್ಲಾಮಾಬಾದ್, ಏ. 25:** ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸುವ ಮತ್ತು ರಾಜತಾಂತ್ರಿಕ ಸಂಬಂಧಗಳನ್ನು ಕೆಳದರ್ಜೆಗೆ ಇಳಿಸುವ ಭಾರತದ ಕ್ರಮಕ್ಕೆ ಸೂಕ್ತ ಪ್ರತಿಕ್ರಿಯೆ ರೂಪಿಸಲು ಪಾಕಿಸ್ತಾನ ಉನ್ನತ ಮಟ್ಟದ ಭದ್ರತಾ ಸಭೆ ನಡೆಸುತ್ತಿದೆ.

ಪ್ರಧಾನಿ ಶೆಹಬಾಜ್ ಷರೀಫ್ ರಾಷ್ಟ್ರೀಯ ಭದ್ರತಾ ಸಮಿತಿ ಸಭೆ ಕರೆದಿದ್ದಾರೆ.ಮೂರು ಸೇನಾ ಮುಖ್ಯಸ್ಥರು ಮತ್ತು ಪ್ರಮುಖ ಪ್ರಮುಖ ಸಚಿವರು ಸಭೆಯಲ್ಲಿ ಭಾಗವಹಿಸಲಿದ್ದಾರೆ ಎಂದು ರೇಡಿಯೋ ಪಾಕಿಸ್ತಾನ ವರದಿ ಮಾಡಿದೆ. ರಾಷ್ಟ್ರೀಯ ಭದ್ರತಾ ಸಮಿತಿಯು ಆಂತರಿಕ ಮತ್ತು ಬಾಹ್ಯ ಪರಿಸ್ಥಿತಿಗಳ ಬಗ್ಗೆ ಚರ್ಚಿಸುತ್ತದೆ ಮತ್ತು ಭಾರತದ ಅವಸರದ, ಹಠಾತ್ ಮತ್ತು ಅಪ್ರಾಯೋಗಿಕ ನೀರಿನ ಕ್ರಮಗಳಿಗೆ ಪ್ರತಿಕ್ರಿಯೆಯನ್ನು ಪರಿಶೀಲಿಸುತ್ತದೆ ಎಂದು ರೇಡಿಯೋ ಪಾಕಿಸ್ತಾನ ಹೇಳಿದೆ.

ತಡರಾತ್ರಿ ಖಾಸಗಿ ಟೆಲಿವಿಷನ್ ಚಾನೆಲ್ ನೊಂದಿಗೆ ಮಾತನಾಡಿದ ಇಶಾಕ್ ದಾರ್ ಅವರು, ಭಾರತದ ವಿಧಾನವನ್ನು ಅಪ್ರಬುದ್ಧ ಮತ್ತು ಅವಸರ ಎಂದು ಕರೆದರು. ಭಾರತ ಯಾವುದೇ ಪುರಾವೆಗಳನ್ನು ನೀಡಿಲ್ಲ. ಅವರು ತಮ್ಮ ಪ್ರತಿಕ್ರಿಯೆಯಲ್ಲಿ ಯಾವುದೇ ಪ್ರಬುದ್ಧತೆಯನ್ನು ತೋರಿಸಿಲ್ಲ ಎಂದು ದಾರ್ ಹೇಳಿದರು.

ಇದು ಗಂಭೀರವಲ್ಲದ ವಿಧಾನವಾಗಿದೆ. ಘಟನೆಯ ನಂತರ ಅವರು ಪ್ರಚಾರವನ್ನು ಸೃಷ್ಟಿಸಲು ಪ್ರಾರಂಭಿಸಿದರು. ಪಾಕಿಸ್ತಾನದ ವಿದೇಶಾಂಗ ಕಚೇರಿ ಪ್ರತ್ಯೇಕ ಹೇಳಿಕೆಯಲ್ಲಿ ಜೀವಹಾನಿ ಬಗ್ಗೆ ವಿಷಾದ ವ್ಯಕ್ತಪಡಿಸಿದೆ. ಭಾರತದ ಪ್ರತಿಕ್ರಿಯೆ ಮತ್ತು ಪಾಕಿಸ್ತಾನದ ಪ್ರತಿ–ಸಂದೇಶವು ದ್ವಿಪಕ್ಷೀಯ ಸಂಬಂಧಗಳನ್ನು ಹೊಸ ಕನಿಷ್ಠ ಮಟ್ಟಕ್ಕೆ ತಳ್ಳಬಹುದು ಎಂದು ರಾಜತಾಂತ್ರಿಕ ವೀಕ್ಷಕರು ಎಚ್ಚರಿಸಿದ್ದಾರೆ. ಇದು 2019 ರ ಪುಲ್ವಾಮಾ–ಬಾಲಕೋಟ್ ಬಿಕ್ಕಟ್ಟಿನ ನಂತರ ಮುಂದುವರೆದಿರುವ ಬಿರುಕುಗಳ ನ್ನು ಮತ್ತಷ್ಟು ವಿಸ್ತರಿಸುತ್ತದೆ. ಒಪ್ಪಂದದ ಅಮಾನತು, ನಿರ್ದಿ ಷ್ಟವಾಗಿ, ದೀರ್ಘಕಾಲೀನ ಜಲ ವಿವಾದಗಳನ್ನು ಹುಟ್ಟುಹಾಕುವ ಅಪಾಯವಿದೆ, ಆದರೆ ರಾಜತಾಂತ್ರಿಕ ಸಂಬಂಧಗಳನ್ನು ಕೆಳದರ್ಜೆಗೆ ಇಳಿಸುತ್ತದೆ ಎಂದಿದ್ದಾರೆ.

# ಮುಗಿಲು ಮುಟ್ಟಿದ ಉಗ್ರರ ದಾಳಿಯಲ್ಲಿ ಮೃತಪಟ್ಟವರ ಕುಟುಂಬಗಳ ಆಕ್ರಂದನ, ಪ್ರತೀಕಾರಕ್ಕೆ ಕೂಗು

**ನವದೆಹಲಿ/ಬೆಂಗಳೂರು,ಏ.25–** ಉಗ್ರರ ಭೀಬತ್ಸ ದಾಳಿಯಲ್ಲಿ ಬಲಿಯಾದ 26 ಜನರ ಪಾರ್ಥಿವ ಶರೀರಗಳು ಅವರ ಹುಟ್ಟೂರಿಗೆ ತಲುಪಿದ್ದು, ಕುಟುಂಬ ಸದಸ್ಯರ ಆಕ್ರಂದನ ಮುಗಿಲುಮುಟ್ಟಿದೆ. ವಿಶೇಷ ವಿಮಾನಗಳ ಮೂಲಕ ವಿವಿಧ ರಾಜ್ಯಗಳಿಗೆ ಮೃತದೇಹಗಳನ್ನು ಕಳುಹಿಸಿಕೊಡಲಾಗಿದ್ದು, ಜಿಲ್ಲಾಡಳಿತದಿಂದ ಆಯಾ ಜಿಲ್ಲೆಗಳಲ್ಲಿ ವಿಶೇಷ ವ್ಯವಸ್ಥೆಯನ್ನೂ ಕೂಡ ಮಾಡಿ ಗೌರವ ಸಲ್ಲಿಸಲಾಗಿದ್ದು, ಹಲವಾರು ರಾಜಕೀಯ ಮುಖಂಡರು, ರಕ್ಷಣಾಪಡೆಯ ಸಿಬ್ಬಂದಿಗಳು ಸೇರಿದಂತೆ ಹಲವಾರು ಗಣ್ಯರು ಅಂತಿಮದರ್ಶನ, ಅಂತ್ಯಕ್ರಿಯೆಯಲ್ಲಿ ಪಾಲ್ಗೊಂಡಿದ್ದಾರೆ.

ದೇಶದಲ್ಲೆ ಈ ಘಟನೆ ಭಾರಿ ಆತಂಕ ಮೂಡಿಸಿದ್ದು, ಹಿಂದೂಗಳನ್ನೆ ಗುರಿಯಾಗಿಸಿಕೊಂಡು ಈ ದಾಳಿ ನಡೆದಿದೆ. ವಿಶ್ವನಾಯಕರು



ಇದನ್ನು ಕಟುವಾಗಿ ಟೀಕಿಸಿರುವ ನಡುವೆಯೇ ಜನರಲ್ಲಿ ಪಾಕಿಸ್ತಾನದ ವಿರುದ್ಧ ಆಕ್ರೋಶ ವ್ಯಕ್ತವಾಗಿದೆ. ಕಳೆದ ರಾತ್ರಿ ಶ್ರೀನಗರದಿಂದ ವಿಶೇಷ ವಿಮಾನಗಳ ಮೂಲಕ ಪಾರ್ಥಿವ ಶರೀರಗಳನ್ನು ಕಳುಹಿಸಿಕೊ ಡಲಾಗಿದ್ದು, ಅದರಲ್ಲಿ ಕೆಲವು ಕೇಂದ್ರ ಮಂತ್ರಿಗಳು ಕೂಡ ಕುಟುಂಬ ಸದಸ್ಯರ ಜೊತೆಗೆ ಭಾಗಿಯಾ ಗಿದ್ದರು. ಇಂದು ಮುಂಜಾನೆ 3.45 ರ ಸುಮಾರಿಗೆ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನನಿಲ್ದಾಣಕ್ಕೆ ಬಂದ ಬೆಂಗಳೂರಿನ ಮತ್ತಿಕೆರೆ ನಿವಾಸಿ ಭರತ್ ಭೂಷಣ್ ಮತ್ತು ಶಿವಮೊಗ್ಗ ಮಂಜುನಾಥ್‌ರಾವ್ ಅವರ ಪಾರ್ಥಿವ ಶರೀರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ.ಸೋಮಣ್ಣ ಮತ್ತು ಸಂಸದ ತೇಜಸ್ವಿ ಸೂರ್ಯ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳು ಪಾಲ್ಗೊಂಡು ಅಂತಿಮ ನಮನ ಸಲ್ಲಿಸಿದರು.

### ತಂದೆ–ಮಗ ಸೇರಿ ಗುಜರಾತಿನ ಮೂವರಿಗೆ ಅಂತಿಮ ನಮನ:

ಪಹಲ್ಗಾಮ್‌ನ ಉಗ್ರರ ದಾಳಿಯಲ್ಲಿ ಗುಜರಾತಿನ ಮೂರು ಮಂದಿ ಮೃತಪಟ್ಟಿದ್ದು, ಅವರ ಪಾರ್ಥಿವ ಶರೀರಗಳು ಇಂದು ಅಹಮದಾಬಾದ್ ಮತ್ತು ಸೂರತ್‌ಗೆ ತಲುಪಿವೆ.ಸೂರತ್‌ನ ಶೈಲೇಶ್ ಕಲಾತಿಯ, ಭಾವನಗರ್‌ನ ನಿವಾಸಿಗಳಾದ ಯತೀಶ್ ಪರ್ಮಾರ್ ಮತ್ತು ಅವರ ಪುತ್ರ ಸಮಿತ್ ಅವರು ಜಮು–ಕಾಶಿ?ರದಲ್ಲಿ ಉಗ್ರರ ಗುಂಡಿಗೆ ಬಲಿಯಾದವರು.ಧಾರ್ಮಿಕ ಸಂತ ಮುರಾರಿ ಬಾಬು ಅವರ ಪ್ರವಚನ ಕೇಳಲು ಜಮು–ಕಾಶ್ಮೀರಕ್ಕೆ ಭಾವನಗರ್‌ದಿಂದ 19 ಮಂದಿ ತೆರಳಿದ್ದರು.

ಏ.16ರಂದು ಪ್ರವಚನ ಮುಗಿಸಿಕೊಂಡು ಯತೀಶ್ ಪರ್ಮಾರ್ ಕುಟುಂಬ ಸಮೇತರಾಗಿ ಪಹಲ್ಗಾಮ್ ಜಿಲ್ಲೆಯ ಪ್ರವಾಸಕ್ಕೆ ತೆರಳಿದ್ದರು. ಅಲ್ಲಿ ಗುಂಡಿನ ದಾಳಿಯಲ್ಲಿ ಯತೀಶ್ ಮತ್ತು ಅವರ ಮಗ ಸಮಿತ್ ಇಬ್ಬರೂ ಹತ್ಯೆಯಾಗಿದ್ದಾರೆ. ಅವರ ದೇಹಗಳನ್ನು ಮುಂಬೈನಿಂದ ಅಹಮದಾಬಾದ್ ವಿಮಾನನಿಲ್ದಾಣಕ್ಕೆ ಕರೆತರಲಾಯಿತು. ಗುಜರಾತ್‌ನ ಆರೋಗ್ಯ ಸಚಿವ ಹೃಷಿಕೇಷ್ ಪಟೇಲ್ ಹಾಗೂ ರಾಜ್ಯ ಆರೋಗ್ಯ ಸಚಿವ ಹರ್ಷ ಸಾಂಗ್ವಿ ಅವರು ವಿಮಾನನಿಲ್ದಾಣದಲ್ಲಿ ಗೌರವ ನಮನ ಸಲ್ಲಿಸಿದರು. ಅಲ್ಲಿಂದ ಪಾರ್ಥಿವ ಶರೀರಗಳನ್ನು ಭಾವನಗರ್‌ಗೆ ತೆಗೆದುಕೊಂಡು ಹೋಗಲಾಯಿತು. ಅಂತ್ಯಕ್ರಿಯೆಯಲ್ಲಿ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಭಾಗವಹಿಸಿದ್ದರು.ಕೇಂದ್ರ ಸಚಿವ ಸಿ.ಆರ್.ಪಾಟೀಲ್ ಅವರು ಕಲಾತಿಯ ಅವರ ಪಾರ್ಥಿವ ಶರೀರಕ್ಕೆ ಮುಂಬೈನಲ್ಲಿ ಅಂತಿಮ ನಮನ ಸಲ್ಲಿಸಿದ್ದಾರೆ. ಸೂರತ್‌ನ ವಿಮಾನನಿಲ್ದಾಣಕ್ಕೆ ಕಳೆದ ರಾತ್ರಿ ಅವರ ಪಾರ್ಥಿವ ಶರೀರವನ್ನು ತರಲಾಯಿತು. ದಾಳಿಯಲ್ಲಿ ಕಲಾತಿಯ ಅವರ ಪತ್ನಿ ಮತ್ತು ಮಕ್ಕಳು ಬದುಕುಳಿದಿದ್ದಾರೆ.44 ವರ್ಷದ ಕಲಾತಿಯ ಸೂರತ್‌ನ ಚಿಕ್ಕುವಾಡಿ ನಿವಾಸಿಯಾಗಿದ್ದು, ನಾಲ್ಕು ವರ್ಷಗಳ ಹಿಂದೆ ಉದ್ಯೋಗದ ವರ್ಗಾವಣೆ ಸಲುವಾಗಿ ಮುಂಬೈಗೆ ಸ್ಥಳಾಂತರಗೊಂಡಿದ್ದರು. ಕುಟುಂಬ ಸಮೇತರಾಗಿ ಜಮು–ಕಾಶ್ಮೀರ ಪ್ರವಾಸಕ್ಕೆ ಹೋಗಿದ್ದಾಗ ದುರ್ಘಟನೆ ನಡೆದಿದೆ.

### ಮನೀಶ್ ರಂಜನ್ ಅಂತ್ಯಕ್ರಿಯೆ:

ಜಮು– ಕಾಶ್ಮೀರ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯಲ್ಲಿ ಮೃತಪಟ್ಟ ಕೇಂದ್ರ ಗುಪ್ತದಳದ ಅಧಿಕಾರಿ ಮನೀಶ್ ರಂಜನ್ ಅವರ ಪಾರ್ಥಿವ ಶರೀರವನ್ನು ರಾಂಚಿಯ ವಿಮಾನನಿಲ್ದಾಣದಲ್ಲಿ ಬರಮಾಡಿಕೊಳ್ಳಲಾಯಿತು.ವಿಮಾನನಿಲ್ದಾಣದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಾಬುಲಾಲ್ ಮರಳ್ಳಿ ಹಾಗೂ ಜಿಲ್ಲಾಡಳಿತದ ಅಧಿಕಾರಿಗಳು ಹಾಜರಿದ್ದು, ಪಾರ್ಥಿವ ಶರೀರಕ್ಕೆ ನಮನ ಸಲ್ಲಿಸಿದರು. ಅಲ್ಲಿಂದ ಮನೀಶ್ ಅವರ ಹುಟ್ಟೂರು ಪ.ಬಂಗಾಳದ ಪುರುಲಿಯಾ ಜಿಲ್ಲೆಯ ಜಹ್ಲಾದ್ ಗ್ರಾಮಕ್ಕೆ ತೆಗೆದುಕೊಂಡು ಹೋಗಿ ಅಂತ್ಯಸಂಸ್ಕಾರ ಮಾಡಲಾಗಿದೆ. ಉಗ್ರರ ದಾಳಿಯಲ್ಲಿ ಮೃತಪಟ್ಟ 26 ಮಂದಿಯಲ್ಲಿ ಮನೀಶ್ ರಂಜನ್ ಕೂಡ ಒಬ್ಬರಾಗಿದ್ದು, ಕೇಂದ್ರ ಗುಪ್ತದಳದಿಂದ ಹೈದ್ರಾಬಾದ್‌ನಲ್ಲಿ ಸೇವೆ ಸಲ್ಲಿಸುತ್ತಿದ್ದರು. ವ್ಯಾಸಂಗದ ಅವಧಿಯುದ್ದಕ್ಕೂ ಮೆರಿಟ್ ವಿದ್ಯಾರ್ಥಿಯಾಗಿದ್ದ ರಂಜನ್ ಅತ್ಯಂತ ಸಜ್ಜನ, ಸ್ನೆಹಪ್ರಿಯ ಎಂದು ಹೆಸರಾಗಿದ್ದರು. ರಜಾಕಾಲದಲ್ಲಿ ಪ್ರವಾಸ ಹೋಗಿದ್ದ ಅವರು ಜಮು–ಕಾಶಿ?ರದಿಂದ ಬಂದ ಬಳಿಕ ತಂದೆ–ತಾಯಿಯನ್ನು ವೈಷ್ಣೊ?ದೇವಿ ದರ್ಶನಕ್ಕೆ ಕರೆದುಕೊಂಡು ಹೋಗುವ ಯೋಜನೆಯಲ್ಲಿದ್ದರು.

ಅವರ ತಂದೆ ಸರ್ಕಾರಿ ಹಿಂದಿ ಶಾಲೆಯ ಹೆಡ್‌ಮಾಸ್ಟರ್ ಆಗಿ ಇತ್ತೀಚೆಗಷ್ಟೆ ನಿವೃತ್ತರಾಗಿದ್ದರು.ಮನೀಶ್ ಅವರ ಸ್ನೆಹಿತ ಆದಿತ್ಯ ಶರ್ಮ ಘಟನೆಗೆ ತೀವ್ರ ವಿಷಾದ ವ್ಯಕ್ತಪಡಿಸಿದರು. ಈ ರೀತಿಯ ನರಮೇಧವೊಂದರಲ್ಲಿ ಮನೀಶ್ ಜೀವಹಾನಿಯಾಗಲಿದೆ ಎಂದು ನಾವು ಭಾವಿಸಿರಲಿಲ್ಲ. ಭಯೋತ್ಪಾದನೆಗೆ ಧರ್ಮ ಇಲ್ಲ ಎಂದು ಜನ ಹೇಳುತ್ತಾರೆ. ಆದರೆ ಧರ್ಮದ ಕಾರಣಕ್ಕಾಗಿಯೇ ಅಮಾಯಕ ಜೀವಗಳು ಬಲಿಯಾಗಿವೆ ಎಂದು ಆಕ್ರೊಶ ವ್ಯಕ್ತಪಡಿಸಿದ್ದಾರೆ. ಈ ದುರ್ಘಟನೆಯ ಭಾಗಿದಾರರು ಹಾಗೂ ಸಂಚುಕೋರರನ್ನು ಸರ್ಕಾರ ಯಾವುದೇ ಕಾರಣಕ್ಕೂ ಸಹಿಸಬಾರದು ಎಂದು ಅವರು ಆಕ್ರೊಶ ವ್ಯಕ್ತಪಡಿಸಿದ್ದಾರೆ.

# ಪ್ರಸಕ್ತ ಶೈಕ್ಷಣಿಕ ಸಾಲಿಗೆ ಉಚಿತ ದಾಖಲಾತಿ

**ರಾಯಚೂರು, ಏ.25–**ತಾಲ್ಲೂಕಿನ ಮಟಮಾರಿಯಲ್ಲಿ ಸುಜ್ಞಾನಪಥ ಗುರುಕುಲಮ್ ಬಡ ಮತ್ತು ಅನಾಥ ಮಕ್ಕಳ ಉಚಿತ ವಿದ್ಯಾರ್ಥಿ ವಸತಿ ಶಾಲೆ, ಮಟಮಾರಿ ಸುಜ್ಞಾನಪಥ ಗುರುಕುಲಮ್ ಶಾಲೆಗೆ 2025–26ನೇ ಸಾಲಿಗೆ ಸೇರ ಬಯಸುವ ವಿದ್ಯಾರ್ಥಿಗಳಿಗಿದೋ ಸುವರ್ಣಾವಕಾಶವಿದೆ.

ಅನಾಥ ಮಕ್ಕಳಿಗೆ ಅಥವಾ ಕೇವಲ ತಂದೆ ಅಥವಾ ಕೇವಲ ತಾಯಿ ಇರುವ ಮಕ್ಕಳಿಗೆ, ಆರ್ಥಿಕವಾಗಿ ದುಸ್ಥಿತಿಯಲ್ಲಿರುವ ಬಡ ಮಕ್ಕಳಿಗೆ, ಯಾವುದೇ ಜಾತಿ ಭೇದವಿಲ್ಲದೆ ಪ್ರವೇಶ ನೀಡಲಾಗುತ್ತದೆ.

ಸಂಪೂರ್ಣ ಉಚಿತವಾಗಿ ವಿದ್ಯಾಭ್ಯಾಸ ಮಾಡಲು ಅವಕಾಶ ಒದಗಿಸುವ, ಬಡ ಮತ್ತು ಅನಾಥ ಮಕ್ಕಳ ಉಚಿತ ವಿದ್ಯಾರ್ಥಿ ವಸತಿ ಶಾಲೆಯಾಗಿದೆ. ಶಾಲಾ ಪ್ರವೇಶ ಬಯಸುವ ಆಸಕ್ತ ಮಕ್ಕಳು ಹಾಗೂ ಸೇರಿಸ ಬಯಸುವ ತಂದೆ/ತಾಯಿ/ಪಾಲಕ/ಪೋಷಕರು ಗಮನಕ್ಕೆ.

1 ರಿಂದ 6 ನೇ ತರಗತಿಯ ವರೆಗೆ ಈ ಗುರುಕುಲಮ್ ನಲ್ಲಿ ಪ್ರವೇಶಾತಿಯೂ ಸೇರಿದಂತೆ, ಊಟ, ವಸತಿ, ಸಮವಸ್ತ್ರ, ನೋಟ್ ಬುಕ್ ಹೀಗೇ ಎಲ್ಲವೂ ಇಲ್ಲಿ ಸೇರಲಿರುವ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ

ದೊಂದಿಗೆ ಉಚಿತವಾಗಿ ನೀಡಲಾ ಗುತ್ತದೆ. ವಿವಿಧ ಸಂಕಷ್ಟಗಳ ಕಾರಣಗಳಿಂದ ಓದಲಾಗದೆ ತೊಂದರೆಯಲ್ಲಿರುವ ಮಕ್ಕಳಿಗೆ ಸಂಪೂರ್ಣ ಉಚಿತವಾಗಿ ವಸತಿ/ಆಶ್ರಯ/ಶಿಕ್ಷಣ ನೀಡಲಿರುವ ಗುರುಕುಲಮ್ ಹಾಗೂ ಶ್ರೀ ಶಿವಾನಂದ ಮಠ, ಬಡ ಮಕ್ಕಳ ಪಾಲಿಗೆ ಆಶಾಕಿರಣವಾಗಿದೆ.

ಪ್ರವೇಶ ಬಯಸುವವರು: ಪ.ಪೂ.ಶ್ರೀ ಜ್ಞಾನಾನಂದ ಮಹಾರಾಜ್ ಶ್ರೀ ಶಿವಾನಂದ ಮಠ 9902836609., ಸಾಬಣ್ಣ ಗಟ್ಟುಬಿಚ್ಚಾಲಿ

8762296968 ಸುಜ್ಞಾನಪಥ ಗುರುಕುಲಮ್ ಬಡ ಮತ್ತು ಅನಾಥ ಮಕ್ಕಳ ಉಚಿತ ವಿದ್ಯಾರ್ಥಿ ವಸತಿ ಶಾಲೆ ಶ್ರೀ ಶಿವಾನಂದ ಮಠ ಮಟಮಾರಿ ಸಂಪರ್ಕಿಸಲು ಕೋರಲಾಗಿದೆ.

# ಮನೆ ಬೀಗ ಮುರಿದು 1.40 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಕಳವು

**ಕಲಬುರಗಿ,ಏ.25–**ಮನೆ ಬೀಗ ಮುರಿದು 1.40 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಕಳವು ಮಾಡಿರುವ ಘಟನೆ ಇಲ್ಲಿನ ಮಿಲ್ಲತ್ ನಗರದಲ್ಲಿ ನಡೆದಿದೆ.

ಸಲ್ಮಾ ಬೇಗಂ ಆರೀಫ್ ಪಟೇಲ್ ಎಂಬುವವರ ಮನೆ ಬೀಗ ಮುರಿದು ಕಳ್ಳರು 40 ಸಾವಿರ ರೂ.ಮೌಲ್ಯದ 10 ಗ್ರಾಂ.ಬಂಗಾರದ ಸುತ್ತುಂಗುರ, 1 ಲಕ್ಷ ರೂ.ಮೌಲ್ಯದ 5 ಗ್ರಾಂ.ಬಂಗಾರದ 5 ಸುತುಂಗುರ ಸೇರಿ 1.40 ಲಕ್ಷ ರೂ.ಮೌಲ್ಯದ ಚಿನ್ನಾಭರಣ ದೋಚಿಕೊಂಡು ಹೋಗಿದ್ದಾರೆ. ಈ ಸಂಬಂಧ ಸಬ್–ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# ನಾವು ಒಂದಾಗಿದ್ದೇವೆ ಎಂಬ ಸಂದೇಶ ರವಾನಿಸಲೇಬೇಕು : ನಿರ್ಮಲಾನಂದನಾಥಸ್ವಾಮಿ



**ಬೆಂಗಳೂರು,ಏ.25–** ಜಮ್ಮುಕಾಶ್ಮೀರದ ಪಹಲ್ಯಾಮ್‌ನಲ್ಲಿ ನಡೆದ ಭಯೋತ್ಪಾದಕರ ಪೈಶಾಚಿಕ ಕೃತ್ಯವನ್ನು ಖಂಡಿಸಿರುವ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಡಾ.ನಿರ್ಮಲಾನಂದನಾಥಸ್ವಾಮಿ, ನಾವು ಒಂದಾಗಿದ್ದೇವೆ ಎಂಬ ಸಂದೇಶ ರವಾನಿಸಲೇಬೇಕು ಎಂದು ಪ್ರತಿಪಾದಿಸಿದ್ದಾರೆ.

ಇದು ಸಾರ್ವಭೌಮತೆ ಮೇಲೆ ನಡೆದಿರುವ ದಾಳಿ. ಉಗ್ರರನ್ನು ಮಟ್ಟ ಹಾಕಲು ಸರ್ಕಾರ ಏನೆಲ್ಲ ಸಾಧ್ಯವೋ ಅದನ್ನು ಮಾಡಬೇಕು ಎಂದಿದ್ದಾರೆ. 26 ಮಂದಿ ಸಾವು ಆಘಾತ ನೀಡಿದೆ. ಪ್ರೀತಿಪಾತ್ರರ ಕಳೆದುಕೊಂಡ ಕುಟುಂಬದವರಿಗೆ ಸಂತಾಪ ಸೂಚಿಸಿ, ಗಾಯಗೊಂಡವರು ಚೇತರಿಸಿಕೊಳ್ಳಲಿ ಎಂದು ಹಾರೈಸಿದ್ದಾರೆ.

ಒಂದು ಕಾಲದಲ್ಲಿ ಜಮ್ಮುಕಾಶ್ಮೀರ ಅಶಾಂತಿಯ ಬೀಡಾಗಿತ್ತು. ಮೋದಿ ನಿರ್ಧಾರಗಳಿಂದಾಗಿ ಕಳೆದ ಹಲವು ವರ್ಷಗಳಿಂದ ಶಾಂತಿ ನೆಲೆಸಿದೆ. ಇದನ್ನು ಸಹಿಸದ ಉಗ್ರರು ಮನುಷ್ಯತ್ವ ಮರೆತು ಅತ್ಯಂತ ಬರ್ಬರವಾಗಿ ಗುಂಡಿನ ದಾಳಿ ನಡೆಸಿರುವುದನ್ನು ಸಹಿಸಲು ಸಾಧ್ಯವಿಲ್ಲ. ಉಗ್ರರನ್ನು ಮಟ್ಟ ಹಾಕಲು ಸರ್ಕಾರ ಏನೆಲ್ಲಾ ಸಾಧ್ಯವೋ ಅದನ್ನೆಲ್ಲ ಮಾಡಬೇಕು. ಅದಕ್ಕೆ ಸಹಕಾರ ಕೊಡಬೇಕು ಎಂದು ಶ್ರೀಗಳು ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ಯಾದಗಿರಿ ಜಿಲ್ಲೆಯಲ್ಲಿ ಜನಾಕ್ರೋಶ ಯಾತ್ರೆ



**ಕಲಬುರಗಿ.ಏ.25:** ಭ್ರಷ್ಟ ,ಜನವಿರೋಧಿ , ಬಡವರ ವಿರೋಧಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಿಕಾರಿಪುರ ಕ್ಷೇತ್ರದ ಶಾಸಕ ಬಿ. ವೈ. ವಿಜಯೇಂದ್ರ ನೇತೃತ್ವದಲ್ಲಿ ಯಾದಗಿರಿ ಜಿಲ್ಲೆಯಲ್ಲಿ ಜನಾಕ್ರೋಶ ಯಾತ್ರೆ ನಡೆಸಲಾಯಿತು.

ಪ್ರತಿ ನಿತ್ಯವೂ ಬೆಲೆ ಏರಿಕೆಯ ಬರೆ ಎಳೆದು ನಿತ್ಯವೂ ಬಡವರನ್ನು ಹಿಂಡುತ್ತಿರುವ ಭ್ರಷ್ಟ ಕಾಂಗ್ರೆಸ್ ಸರ್ಕಾರವನ್ನು ತೊಲಗಿಸಲು ಸಹಸ್ರಾರು ಸಂಖ್ಯೆಯಲ್ಲಿ ಜನಸಾಮಾನ್ಯರು ಹಾಗೂ ಕಾರ್ಯಕರ್ತರು ಭಾಗವಹಿಸಿ ಆಕ್ರೋಶ ಹೊರಹಾಕುವ ಮೂಲಕ ಬಿಜೆಪಿಯ ಬೃಹತ್ ಜನಪರ ಆಂದೋಲನವನ್ನು ಬೆಂಬಲಿಸಿದ ಪರಿ ಜನವಿರೋಧಿ ಕಾಂಗ್ರೆಸ್ ಸರ್ಕಾರ ತೊಲಗಿಸಲು ಸಂಕಲ್ಪ ತೊಟ್ಟಿರುವುದನ್ನು ಸಾಕ್ಷೀಕರಿಸಿತು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ವಿಪಕ್ಷ ನಾಯಕರಾದ ಛಲವಾದಿ ನಾರಾಯಣಸ್ವಾಮಿ, ಎಂಎಸಿ ಡಾ. ಬಿಜಿ ಪಾಟೀಲ, ವಿಧಾನ ಸಭೆ ವಿರೋಧ ಪಕ್ಷದ ಮುಖ್ಯ ಸಚೇತಕ ದೊಡ್ಡಣ್ಣಗೌಡ ಪಾಟೀಲ, ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ, ಮಾಜಿ ಸಚಿವರಾದ ಶ್ರೀರಾಮುಲು, ರಾಜೂಗೌಡ, ಮಹೇಶ ರೆಡ್ಡಿ, ಜಿಲ್ಲಾಧ್ಯಕ್ಷ ಬಸವರಾಜ ವಿಭೂತಿಹಳ್ಳಿ, ಮಾಜಿ ಜಿಲ್ಲಾಧ್ಯಕ್ಷ ಚಂದ್ರಶೇಖರ ಮಗನೂರ್, ಅಮೀನ ರೆಡ್ಡಿ, ಗುರು ಕಾಮ, ಸೇರಿದಂತೆ ಪಕ್ಷದ ಪ್ರಮುಖರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ಮಾನವಿ ಪುರಸಭೆಯಿಂದ ಅರ್ಜಿ ಆಹ್ವಾನ

**ರಾಯಚೂರು (ಮಾನವಿ),ಏ.25:** ಜಿಲ್ಲೆಯ ಮಾನವಿ ಪುರಸಭೆಯಿಂದ 2025–26ನೇ ಸಾಲಿನ ಎಸ್‌ಸಿಎಸ್‌ಪಿ ಶೇ.7.25 ಮತ್ತು ಟಿಎಸ್‌ಪಿ ಶೇ.5 ಯೋಜನೆಯಡಿ ಎಸ್‌ಸಿ, ಎಸ್‌ಟಿ ಬಡ ಜನಾಂಗದವರಿಗೆ ಉಚಿತ ಗ್ಯಾಸ್ ವಿತರಣೆ ಮಾಡಲು ಹಾಗು ಇತರ ಬಡ ಜನಾಂಗದ ಶೇ.7.25 ಯೋಜನೆಯಡಿಯಲ್ಲಿ ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಪದವಿ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಹಾಯಧನ ನೀಡಲು ಹಾಗೂ ಶೇ.5ರ ಯೋಜನೆಯಡಿಯಲ್ಲಿ ವಿಕಲಚೇತನರಿಗೆ ಸ್ವಯಂ ಉದ್ಯೋಗಕ್ಕಾಗಿ ಸಹಾಯಧನವನ್ನು ನೀಡಲು ಅನುದಾನವನ್ನು ಕಾಯ್ದಿರಿಸಲಾಗಿದೆ.

ಸಾರ್ವಜನಕರು ಮತ್ತು ವಿದ್ಯಾಥಿಗಳು, ವಿಕಲಚೇತನರು ಏ.29ರ ಸಂಜೆ 5.30ರೊಳಗೆ ಪುರಸಭೆ ಕಾರ್ಯಾಲಯಕ್ಕೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಪುರಸಭೆಯ ಕಚೇರಿ ವ್ಯವಸ್ಥಾಪಕರನ್ನು ಸಂಪರ್ಕಿಸಬಹುದು ಎಂದು ಮಾನವಿ ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಪಾಲಿಟೆಕ್ನಿಕ್‌ದಲ್ಲಿ ಪರೀಕ್ಷೆಗೆ ನೋಂದಾಯಿಸಲು ಕಾಲಾವಕಾಶ

**ರಾಯಚೂರು,ಏ.25:** ತಾಂತ್ರಿಕ ಸಿ–03 ಸಿ–09 ಮತ್ತು ಸಿ–15 ಪಠ್ಯಕ್ರಮದಲ್ಲಿ ಪ್ರಥಮ/ಲ್ಯಾಟರಲ್ ಎಂಟ್ರಿ ಮುಖಾಂತರ ತೃತೀಯ ಸೆಮಿಸ್ಟರ್ ಪ್ರವೇಶ ಪಡೆದು 09/06 ವರ್ಷಗಳ ಕಾಲಾವಧಿ ಮೀರಿರುವ ವಿದ್ಯಾರ್ಥಿಗಳಿಗೆ ಏಪ್ರಿಲ್/ಮೇ 2025 ರ ಪರೀಕ್ಷೆಗೆ ಹಾಜರಾಗಲು ಸರ್ಕಾರವು ಅನುಮತಿ ನೀಡಿ ಆದೇಶಿಸಿದೆ. ಪ್ರಯುಕ್ತ ವಿದ್ಯಾರ್ಥಿಗಳು ದಂಡರಹಿತವಾಗಿ ನಗದಿತ ಪರೀಕ್ಷಾ ಶುಲ್ಕ ಪಾವತಿಸಿ ಏಪ್ರಿಲ್/ಮೇ 2025 ರ ಪರೀಕ್ಷೆಗೆ ನೋಂದಾಯಿಸಿಕೊಳ್ಳಲು ಏಪ್ರೀಲ್ 26ರವರೆಗೆ ಕಾಲಾವಕಾಶ ನೀಡಲಾಗಿದೆ. ನಂತರ ಯಾವುದೇ ಕಾರಣಕ್ಕೂ ಪರೀಕ್ಷೆ ಶುಲ್ಕ ಪಾವತಿಸಲು ದಿನಾಂಕ ವಿಸ್ತರಿಸಲಾಗುವುದಿಲ್ಲ ಎಂದು ಸ್ಪಷ್ಟಪಡಿಸಲಾಗಿದೆ ಎಂದು ಸರ್ಕಾರಿ ಪಾಲಿಟೆಕ್ನಿಕ್ ರಾಯಚೂರುನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಕ್ತಿ ಕಾಣೆ: ಪತ್ತೆಗೆ ಪೊಲೀಸರ ಮನವಿ

**ರಾಯಚೂರು,ಏ.25:** ದೇವದುರ್ಗ ತಾಲೂಕಿನ ಬಸವಂತಪುರ ಗ್ರಾಮದ ಚಾಲಕನಾದ 35 ವಯೋಮಾನದ ಸಿದ್ದಪ್ಪ ತಂದೆ ಬನ್ನಪ್ಪ ಅವರು ಕಾಣೆಯಾದ ಬಗ್ಗೆ ಗಬ್ಬೂರು ಠಾಣೆಯಲ್ಲಿ ಗುನ್ನೆ ನಂ–55/2025 ಕಲಂರಡಿ ಮನುಷ್ಯ ಕಾಣೆ ಪ್ರಕರಣ ದಾಖಲಾಗಿದೆ.

ಫಿರ್ಯಾದಿ ನೀಡಿದ ವ್ಯಕ್ತಿಗೆ 03 ಜನ ಗಂಡುಮಕ್ಕಳಿದ್ದು, ಅದರಲ್ಲಿ ಕಾಣೆಯಾದ ಸಿದ್ದಪ್ಪ ಈತನು ಸುಮಾರು 15 ವರ್ಷಗಳ ಹಿಂದೆ ಯಾವುದೋ ಯೋಚನೆಯಲ್ಲಿ ಮನೆಬಿಟ್ಟು ಹೋಗಿದ್ದು, 15 ದಿನಗಳ ನಂತರ ರಾಯಚೂರಿನಲ್ಲಿ ಪತ್ತೆಯಾಗಿರುತ್ತಾನೆ. ನಂತರ 10 ವರ್ಷಗಳ ಹಿಂದೆ ವಿವಾಹ ಮಾಡಿದ್ದು ಇನ್ನೂ ಮಕ್ಕಳು ಆಗದೇ ಇರುವುದರಿಂದ ಅದೇ ಚಿಂತೆಯಲ್ಲಿ ಹೆಂಡ ಕುಡಿಯೋ ಚಟಕ್ಕೆ ಬಿದ್ದಿದ್ದು, ದಿನಾಂಕ 12.04.2025 ರಂದು ಮಧ್ಯಾಹ್ನ 12 ಗಂಟೆ ಸುಮಾರಿಗೆ ದೇವಸೂಗೂರಿಗೆ ಹೋಗಿ ಬರುವುದಾಗಿ ಹೇಳಿ ಮನೆಬಿಟ್ಟು ಹೋಗಿದ್ದು ಇಲ್ಲಿಯವರೆಗೆ ವಾಪಸ್ ಮನೆಗೆ ಬಂದಿರುವುದಿಲ್ಲ.

ಅಲ್ಲಲ್ಲಿ ಹುಡುಕಾಡಿ ಸಂಬಂಧಿಕರ ಮನೆಗಳಿಗೆ ವಿಚಾರಿಸಿದ್ದು ಎಲ್ಲಿಯೂ ಪತ್ತೆಯಾಗಿರುವುದಿಲ್ಲ, ಈ ಹಿಂದೆಯೂ ಕೂಡ ಮನೆಬಿಟ್ಟು ಹೋಗಿ ವಾಪಸ್ ಬಂದಿದ್ದರಿಂದ ಅದರಂತೆ ಬರುವನೆಂದು ಕಾದರೂ ಸಿದ್ದಪ್ಪ ಬಂದಿಲ್ಲ ಎಂದು ಫಿರ್ಯಾದಿದಾರರು ದೂರು ದಾಖಲಿಸಿದ್ದಾರೆ. ಸಿದ್ದಪ್ಪ ಅವರು ಸದೃಢ ದೇಹ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, 5.0 ಅಡಿ ಎತ್ತರ ಇದ್ದಾರೆ. ಕನ್ನಡ ಮಾತನಾಡುತ್ತಾರೆ. ಮನೆಯಿಂದ ಹೋಗುವಾಗ ಬಿಳಿ ಬಣ್ಣದ ಅಂಗಿ ಮತ್ತು ಬಿಳಿ ಬಣ್ಣದ ಲುಂಗಿ ಧರಿಸಿ ಹೋಗಿರುತ್ತಾನೆ. ಈ ಭಾವಚಿತ್ರದಲ್ಲಿ ಇರುವ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಗಬ್ಬೂರು ಠಾಣೆ ನಂ–9480803860, ಸಿಪಿಐ ದೇವದುರ್ಗ–ಮೊ:9480803835 ವಿಳಾಸಕ್ಕೆ ಸಂಪರ್ಕಿಸಲು ಕೋರಲಾಗಿದೆ ಎಂದು ಪಿ.ಎಸ್.ಐ. ಗಬ್ಬೂರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**